ಸಂಪುಟ : 9 ಸಂಚಿಕೆ 163 ಪುಟ : 4 ಬೆಲೆ: 3.00 ಶನಿವಾರ ಆಗಸ್ಟ್ 3 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ


ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 163 Pages : 4 Price : 3.00 Saturday August 3 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಚಿವ ಡಾ.ಎಚ್.ಕೆ. ಪಾಟೀಲ ಜಿಲ್ಲಾ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಆಗಸ್ಟ್ 3ರ ಗದಗ ಜಿಲ್ಲಾ ಪ್ರವಾಸದ ವಿವರ ಹೀಗಿದೆ.

ಮಧ್ಯಾಹ್ನ 3.00 ಗಂಟೆಗೆ ನರಗುಂದ ತಾಲೂಕಿನ ಕೊಣ್ಣೂರ ಗ್ರಾಮಕ್ಕೆ ತೆರಳಿ ಪ್ರವಾಹಕ್ಕೆ ತುತ್ತಾಗಬಹುದಾದ ಸಂಭವನೀಯ ಪ್ರದೇಶಗಳಿಗೆ ಭೇಟಿ ನೀಡುವರು.

ಸಾಯಂಕಾಲ 4.30 ಗಂಟೆಗೆ ನರಗುಂದ ತಹಸೀಲ್ದಾರ ಕಚೇರಿಯಲ್ಲಿ ತಹಸೀಲ್ದಾರರೊಂದಿಗೆ ಪ್ರವಾಹ ಪೀಡಿತರಿಗಾಗಿ ಕಾಳಜಿ ಕೇಂದ್ರ ಹಾಗೂ ಇತರ ಅಗತ್ಯ ವ್ಯವಸ್ಥೆ ಕುರಿತು ನಡೆಯುವ ಸಭೆಯಲ್ಲಿ ಪಾಲ್ಗೊಳ್ಳುವರು.

ಸಾಯಂಕಾಲ 6.00 ಗಂಟೆಗೆ ರಸ್ತೆ ಮೂಲಕ ಹುಬ್ಬಳ್ಳಿಗೆ ಪ್ರಯಾಣಿಸುವರು ಎಂದು ಸಚಿವರ ಕಾರ್ಯಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಆಗಸ್ಟ್ 3 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 22 ರಲ್ಲಿ 1 ರಿಂದ 5 ನೇ ಕ್ರಾಸ್‌ವರೆಗೆ, ನಿಂಗಪ್ಪರ ಲೈನ್, ಸದಾಯಿಯವರ ಲೈನ್, ಹಕ್ಕಿಯವರ ಲೈನ್, ಪಾಮಡೆ ಲೈನ್, ಗಾರ್ಡನ್ ಲೈನ್, ಸ್ವಾಮಿಯವರ ಲೈನ್, ವಾಯದ್‌ವರ ಲೈನ್, ಧಾರವಾಡದವರ ಲೈನ್, ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 20, 21, 23 ಕಗ್ಗನಹಳ್ಳಿ, ಆರೋಗೇರಿ ಭಾಗ -1,2,3, ಹೆಬಸೂರ ಲೈನ್, ಹೊನ್ನೆತಮ್ಮನ ಗುಡಿ ಭಾಗ -1,2, ಸೋಮನಗೌಡ್ರ ಲೈನ್, ಕಾಳಮ್ಮ ಗುಡಿ, ದ್ರೌಪದಿ ಬಾಯಿ, ಉಸುಗಿನಗಟ್ಟಿ, ಹನುಮಾನ ಗರಡಿ, ಜಂತ್ಲಿಯವರ ಹೊಸ ಲೈನ್, ದ್ಯಾಮವ್ವನ ಕಟ್ಟಿ. ವಾರ್ಡ್ ನಂ. 34, 35 ಸೇವಾಲಾಲ್ ನಗರ, ಬಾಪೂಜಿನಗರ 2,3 ನೇ ಕ್ರಾಸ್, ಉಳಿದ ಕೆಲವು ಭಾಗಗಳು.

ವಾರ್ಡ್ ನಂ 29 ಸಾಯಿನಾಥ್ ನಗರ, ಪಂಚಾಕ್ಷರಿ ನಗರ 3ನೇ ಕ್ರಾಸ್, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6 ಚನ್ನಪ್ಪಗೌಡ್ರ ಪ್ಲಾಟ್, ಹಳ್ಳಿಕೇರಿ ಪ್ಲಾಟ್, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 5 ನರಸಾಪುರ ಆಶ್ರಯ ಕಾಲೋನಿ, ನೇಕಾರ ಕಾಲೋನಿ. ವಾರ್ಡ್ ನಂ. 1 ಎಸ್ ಎಂ ಕೃಷ್ಣ ನಗರ ಮೇಲಿನ ಭಾಗ ಕೆಳಗಿನ ಭಾಗ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಖಾಲಿಯಿರುವ ಲಕ್ಷ್ಮೇಶ್ವರ ತಾಲೂಕು ಯಳವತ್ತಿ ಹಾಗೂ ಮುಂಡರಗಿ ತಾಲೂಕಿನ ಶಿವಾಜಿನಗರ ಗ್ರಾಮ ಪಂಚಾಯತಿಗಳ ಗ್ರಾಮ ಒನ್ ಕೇಂದ್ರಗಳಿಗೆ ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಆಗಸ್ಟ್ 15 ರೊಳಗಾಗಿ ಅರ್ಜಿಗಳನ್ನು https://www.karnatakaone.gov.in/Public/GramOneFranchiseeTerms ನಲ್ಲಿ ಆನ್ ಲೈನ್ ಮೂಲಕ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೋಟೆ ನಾಡಿನಲ್ಲಿ 10ನೇ ಜಿಲ್ಲಾ ಮಟ್ಟದ ಕನ್ನಡ ಸಾಹಿತ್ಯ ಸಂಭ್ರಮ

# ಕಾರ್ಯಕ್ರಮದ ಯಶಸ್ಸಿಗೆ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ರೋಣ

ಆಗಸ್ಟ್ 23ರಿಂದ 25ರವರೆಗೆ ಜಿಲ್ಲಾ ಮಟ್ಟದ 10ನೇ ಕನ್ನಡ ಸಾಹಿತ್ಯ ಸಮ್ಮೇಳನ ಕೋಟೆನಾಡು ಗಜೇಂದ್ರಗಡದಲ್ಲಿ ನಡೆಯಲಿದ್ದು, ಕನ್ನಡದ ಜಾತ್ರೆಯನ್ನು ಸಂಭ್ರಮದಿಂದ ಆಚರಿಸಬೇಕು ಎಂದು ಖನಿಜ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಶುಕ್ರವಾರ ಸಂಜೆ ತಹಸೀಲ್ದಾರ ಕಚೇರಿಯ ಸಭಾಂಗಣದಲ್ಲಿ ಜರುಗಿದ ಕನ್ನಡ ಸಾಹಿತ್ಯ ಸಮ್ಮೇಳನದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕನ್ನಡ ನಾಡು-ನುಡಿಗೆ ರೋಣ ಸೇರಿದಂತೆ ಗಜೇಂದ್ರಗಡ ತಾಲೂಕುಗಳು ವಿಶೇಷ ಕೊಡುಗೆಗಳನ್ನು ನೀಡಿವೆ. ಈ ಜಿಲ್ಲಾ ಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಂತೆ ಜರುಗಬೇಕು. ಇದಕ್ಕಾಗಿ ನಾನು ಎಲ್ಲ ರೀತಿಯ ಸಹಕಾರ ನೀಡಲು ಸಿದ್ಧನಿದ್ದು, ಅಧಿಕಾರಿಗಳೂ ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಬೇಕು ಎಂದರು.



ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಆ.23ರಂದು ಜಕ್ಕಲಿ ಗ್ರಾಮದ ಅಂದಾನಪ್ಪ ದೊಡ್ಡಮೇಟಿಯವರ ಮನೆಯಿಂದ ತಾಯಿ ಭುವನೇಶ್ವರಿಯ ಭಾವಚಿತ್ರದ ಮೆರವಣಿಗೆ ಹೊರಡಲಿದೆ. ದೊಡ್ಡಮೇಟಿಯವರ ಕುರಿತು ಗ್ರಾಮದ ಪ್ರೌಢಶಾಲಾ ಆವರಣದಲ್ಲಿ ಉಪನ್ಯಾಸವನ್ನು ಹಮ್ಮಿಕೊಂಡಿದ್ದು, ನಂತರ ಮೆರವಣಿಗೆ ನರೇಗಲ್ಲ ಪಟ್ಟಣದ ಮೂಲಕ ನಿಡಗುಂದಿ ತಲುಪಿ ಸಂಜೆ ಗಜೇಂದ್ರಗಡ ಪಟ್ಟಣಕ್ಕೆ ಆಗಮಿಸಲಿದೆ ಎಂದರು.

> ದೇಶಕ್ಕಾಗಿ, ಕನ್ನಡ ನಾಡು-ನುಡಿಯ ಹಿತಕ್ಕಾಗಿ ಅಂದಾನಪ್ಪ ದೊಡ್ಡಮೇಟಿಯವರ ಕೊಡುಗೆ ಅಪಾರವಾಗಿದೆ. ಈ ಹಿನ್ನೆಲೆಯಲ್ಲಿ ಅವರ ಬಗ್ಗೆ ಇಂದಿನ ಪೀಳಿಗೆಗೆ ತಿಳಿಸುವುದು ಅಗತ್ಯವಾಗಿದೆ. ಅಲ್ಲದೆ ಜಿಲ್ಲೆಯ ಬೆಳ್ಳಿ ಹಬ್ಬ, ನಾಡಿನ 50ರ ಸಂಭ್ರಮ ಸೇರಿದಂತೆ ಜಕ್ಕಲಿ ಗ್ರಾಮದ ಇತಿಹಾಸವನ್ನು ಮೆಲಕು ಹಾಕುವ ಕಾರ್ಯ ಆ.23ರಂದು ಸಂಭ್ರಮದಿಂದ ನಡೆಯಬೇಕು.
>
> **– ಜಿ.ಎಸ್. ಪಾಟೀಲ.**
> ಶಾಸಕರು, ರೋಣ.

ಆ.24ರಂದು ಬೆಳಿಗ್ಗೆ 9ಕ್ಕೆ ಶಾಸಕ ಜಿ.ಎಸ್. ಪಾಟೀಲರು ಕನ್ನಡದ ಧ್ವಜಾರೋಹಣ ನೆರವೇರಿಸುವ ಮೂಲಕ ಕಾರ್ಯಕ್ರಮಗಳಿಗೆ ಚಾಲನೆ ನೀಡುವರು. ನಂತರ ವೇದಿಕೆ ಸಮಾರಂಭವನ್ನು ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಅನೇಕ ಸಚಿವರು ಹಾಗೂ ಶಾಸಕರುಗಳು ಉದ್ಘಾಟಿಸಲಿದ್ದಾರೆ. ನಂತರ ಕನ್ನಡ ನಾಡಿನ ಹಿರಿಮೆ ಕುರಿತು ಗೋಷ್ಠಿಗಳು ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ವಿವರಿಸಿದರು.

ಸಮ್ಮೇಳನದ ಅಧ್ಯಕ್ಷರನ್ನಾಗಿ ಪ್ರೊ. ಚಂದ್ರಶೇಖರ್ ವಸ್ತ್ರದರನ್ನು ಆಯ್ಕೆ ಮಾಡಲಾಗಿದ್ದು, ಸಾರೋಟ ಹಾಗೂ ಕುಂಭಮೇಳದ ಮೆರವಣಿಗೆ ಮೂಲಕ ಅವರನ್ನು ಕರೆತರಲಾಗುವುದು ಎಂದ ಅವರು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಕಾರ್ಯಕ್ರಮದ ಯಶಸ್ಸಿಗೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಈ ಸಂಧರ್ಭದಲ್ಲಿ ಎರಡೂ ತಾಲೂಕುಗಳ ತಹಸೀಲ್ದಾರರು, ಅಧಿಕಾರಿಗಳು ಉಪಸ್ಥಿತರಿದ್ದರು.

### ಶ್ರೀ ಬೂದಿವಂತ ಬಸವೇಶ್ವರ ದೇವಸ್ಥಾನದ ಜೀರ್ಣೋದ್ಧಾರ ಕಾಮಗಾರಿಗೆ ಚಾಲನೆ

# ನಾವು ಮಾಡುವ ಕಾರ್ಯಗಳು ಶಾಶ್ವತ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತೀಯ ಸಂಸ್ಕೃತಿಯಲ್ಲಿ ಧರ್ಮ, ದೇವಸ್ಥಾನಗಳು, ದೇವರು, ಸಂಸ್ಕೃತಿಯ ಬಗ್ಗೆ ಅಪಾರವಾದ ಶಕ್ತಿ, ನಂಬಿಕೆ, ಶ್ರದ್ಧೆ, ಗೌರವವಿದೆ. ಈ ಸತ್ ಸಂಪ್ರದಾಯ-ಪರಂಪರೆಯ ಶ್ರೀಮಂತಿಕೆಯನ್ನು ಹೆಚ್ಚಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ಮಾಜಿ ಸಚಿವ ಬಿ.ಶ್ರೀರಾಮುಲು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಸಮೀಪದ ಅಡರಕಟ್ಟಿ ಗ್ರಾಮದ ಶ್ರೀ ಬೂದಿವಂತ ಬಸವೇಶ್ವರ ದೇವಸ್ಥಾನದ ಜೀರ್ಣೋದ್ಧಾರ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದರು.

ದೇವಸ್ಥಾನಗಳು ಆಯಾ ಭಾಗದ ಇತಿಹಾಸ, ಸಂಸ್ಕೃತಿಗಳನ್ನು ಪ್ರತಿಬಿಂಬಿಸುತ್ತವೆ. ಅದಕ್ಕಾಗಿ ದೇವಸ್ಥಾನಗಳ ರಕ್ಷಣೆಯಾಗಬೇಕು. ಅತ್ಯಂತ ಪವಿತ್ರ, ಜಾಗೃತ, ಇಷ್ಟಾರ್ಥ ಸಿದ್ಧಿಸುವ ಈ ಬಸವೇಶ್ವರ ದೇವಸ್ಥಾನಕ್ಕೆ ನಾನು ಪ್ರತಿ ವರ್ಷ ಬಂದು ಹೋಗುತ್ತಿದ್ದೆ. ಕಾರಣಾಂತರಗಿಂದ ಸ್ಥಗಿತಗೊಂಡಿದ್ದ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯ ಪೂರ್ಣಗೊಳಿಸುವ ಭರವಸೆ ನೀಡಿದ್ದೇನೆ. ಅಧಿಕಾರ ಶಾಶ್ವತವಲ್ಲ, ನಾವು ಮಾಡುವ ಕಾರ್ಯಗಳು ಶಾಶ್ವತವಾಗಿರುತ್ತವೆ ಎಂದರು.



ಮಳೆಯ ಕಾರಣದಿಂದ ಬೆಳೆಹಾನಿ ಬಗ್ಗೆ ಪರಿಶೀಲಿಸಿ ಸಮಗ್ರ ವರದಿ ಸಲ್ಲಿಸಲು ಪಕ್ಷದ ಪ್ರಮುಖರ ತಂಡ ರಚಿಸಲಾಗಿದೆ. ವರದಿಯನ್ನು ಮುಖ್ಯಮಂತ್ರಿಗಳಿಗೆ ನೀಡುವ ಮೂಲಕ ರೈತರಿಗೆ ಪರಿಹಾರ ನೀಡುವಂತೆ ಮನವಿ ಮಾಡುವದಾಗಿ ಹೇಳಿದರು.

ದೇವಸ್ಥಾನದ ಅರ್ಚಕರಾದ ಶ್ರೀಶೈಲ ಮಹಾಸ್ವಾಮಿಗಳು ಮಾತನಾಡಿ, ಶ್ರೀರಾಮುಲು ಅವರ ಇಚ್ಛೆಯಂತೆ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯ ನಡೆಯುತ್ತಿದೆ. ದೇವರ ಇಚ್ಛೆಯಂತೆ ಶ್ರೀರಾಮುಲು ಅವರು ಮತ್ತೆ ಅಧಿಕಾರಕ್ಕೆ ಬರುತ್ತಾರೆ ಎಂದು ನುಡಿದರು.

ಮಾಜಿ ಶಾಸಕ ರಾಮಣ್ಣ ಲಮಾಣಿ, ಮುಖಂಡರಾದ ನಾಗರಾಜ ಕುಲಕರ್ಣಿ, ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ ಮಾತನಾಡಿದರು. ಕಾರ್ಯಕ್ರಮದಲ್ಲಿ ಶಿವಪುತ್ರಯ್ಯ ಹಿರೇಮಠ, ರಾಮಣ್ಣ ಚಿಕ್ಕಣ್ಣವರ, ವಿಜಯ ಹತ್ತಿಕಾಳ, ನಿಂಗಪ್ಪ ಬನ್ನಿ, ನಿಂಗಪ್ಪ ಪ್ಯಾಟಿ, ಅನಿಲ ಮುಳಗುಂದ, ಮುದಿಯಪ್ಪ ಹವಳದ, ನಾಗರಾಜ ಸೊನ್ನ, ಪ್ರಕಾಶ ಬೆಂತೂರ, ಭೀಮಣ್ಣ ಯಂಗಾಡಿ, ಹನುಮಂತ ಜಾಲಿಮರದ ಮುಂತಾದವರಿದ್ದರು.

### ಸ್ವಾತಂತ್ರ್ಯೋತ್ಸವದ ಪೂರ್ವಭಾವಿ ಸಭೆಯಲ್ಲಿ ಶಾಸಕ ಜಿ.ಎಸ್. ಪಾಟೀಲ

# ಸ್ವಾತಂತ್ರ್ಯೋತ್ಸವ ಸಾಂಗವಾಗಿ ನೆರವೇರಲಿ

■ವಿಜಯಸಾಕ್ಷಿ ಸುದ್ದಿ, ರೋಣ

78ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಅದ್ದೂರಿಯಾಗಿ ಜರುಗಬೇಕು. ಈ ವಿಷಯದಲ್ಲಿ ನಿಷ್ಕಾಳಜಿಯನ್ನು ಸಹಿಸುವುದಿಲ್ಲ ಎಂದು ಖನಿಜ ನಿಗಮದ ಅಧ್ಯಕ್ಷ ಹಾಗೂ ಶಾಸಕ ಜಿ.ಎಸ್. ಪಾಟೀಲ ಸೂಚನೆ ನೀಡಿದರು.

ಅವರು ಶುಕ್ರವಾರ ತಾ.ಪಂ ಸಭಾಭವನದಲ್ಲಿ ಜರುಗಿದ 78ನೇ ಸ್ವಾತಂತ್ರ್ಯೋತ್ಸವದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.



> ತಾಲೂಕಾ ಮಟ್ಟದ ಪದವಿಪೂರ್ವ ಮಹಾವಿದ್ಯಾಲಯದ ಕ್ರೀಡಾಕೂಟಗಳು ಅ.9 ಹಾಗೂ 10ರಂದು ತಾಲೂಕಾ ಕ್ರೀಡಾಂಗಣದಲ್ಲಿ ನಡೆಯಲಿವೆ. ಒಟ್ಟು 12 ಮಹಾವಿದ್ಯಾಲಯದ 2100 ವಿದ್ಯಾರ್ಥಿಗಳಿಗೆ ಎರಡು ದಿನಗಳ ಕಾಲ ಉಪಹಾರ ಹಾಗೂ ಊಟದ ವ್ಯವಸ್ಥೆಯ ಜವಾಬ್ದಾರಿಯನ್ನು ಶಾಸಕ ಜಿ.ಎಸ್. ಪಾಟೀಲ ವಹಿಸಿಕೊಳ್ಳುವದಾಗಿ ಘೋಷಿಸಿ, ಕ್ರೀಡಾಭಿಮಾನವನ್ನು ಮೆರೆದರು.

ತಾಲೂಕಾ ಕೇಂದ್ರದಲ್ಲಿರುವ ಮುಖ್ಯ ವೃತ್ತಗಳು ಹಾಗೂ ಕಚೇರಿಗಳು ಸೇರಿದಂತೆ ಗ್ರಾಮೀಣ ಭಾಗಗಳ ಸರಕಾರಿ ಕಚೇರಿಗಳನ್ನು ವಿದ್ಯುತ್ ದೀಪಾಲಂಕಾರಗಳಿಂದ ಶೃಂಗರಿಸಬೇಕು. ಅಲ್ಲದೆ ಅಧಿಕಾರಿಗಳು ಖುದ್ದು ಹಾಜರಿದ್ದು ಪರಿಶೀಲಿಸಬೇಕು ಮತ್ತು ಆ.15ರಂದು ಅಧಿಕಾರಿಗಳು ಸೇರಿದಂತೆ ಸಿಬ್ಬಂದಿಗಳು ಉಪಸ್ಥಿತರಿರಬೇಕು ಎಂದರು.

ತಾಲೂಕಾಡಳಿತದಿಂದ ದ್ರೋಣಾಚಾರ್ಯ ಕ್ರೀಡಾಂಗಣದಲ್ಲಿ ಧ್ವಜಾರೋಹಣ ನೆರವೇರಲಿದೆ. ಶಾಲಾ ಮಕ್ಕಳ ಮೆರವಣಿಗೆ ಎಸ್. ಆರ್. ಪಾಟೀಲ ಶಾಲೆಯಿಂದ ಹೊರಡಲಿದೆ. ಈ ಸಂದರ್ಭದಲ್ಲಿ ಪೊಲೀಸರು ಮಕ್ಕಳಿಗೆ ತೊಂದರೆಯಾಗದಂತೆ ಸಂಚಾರ ವ್ಯವಸ್ಥೆ ನಿರ್ವಹಿಸಬೇಕು ಎಂದು ಸೂಚಿಸಿದರು.

ಸ್ವಾತಂತ್ರ್ಯ ಹೋರಾಟಗಾರರು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹನೀಯರನ್ನು ಸನ್ಮಾನಿಸುವ ಸಂಧರ್ಭದಲ್ಲಿ ಯಾವುದೇ ಅಚಾತುರ್ಯ ನಡೆಯಬಾರದು. ಈ ವಿಷಯವಾಗಿ ತಹಸೀಲ್ದಾರರು ಎಚ್ಚರಿಕೆ ವಹಿಸಬೇಕು. ಕ್ರೀಡಾಂಗಣದಲ್ಲಿ ಕುಡಿಯುವ ನೀರಿನ ವ್ಯವಸ್ಥೆ, 108 ವಾಹನ, ಅಗ್ನಿಶಾಮಕದಳ ಇವೆಲ್ಲವೂ ಕಡ್ಡಾಯವಾಗಿ ಇರಬೇಕು. ಶಾಲಾ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮದ ಸಂದರ್ಭದಲ್ಲಿ ಹೆಚ್ಚಿನ ಸ್ಥಳಾವಕಾಶವನ್ನು ಕಲ್ಪಿಸಿಕೊಡಬೇಕು ಎಂದು ತಿಳಿಸಿದರು.

ತಹಸೀಲ್ದಾರ್ ನಾಗರಾಜ ಕೆ ಸೇರಿದಂತೆ ತಾಲೂಕಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು

### ಸ್ವಾತಂತ್ರ್ಯೋತ್ಸವದ ಅಂಗವಾಗಿ 'ಇಂಡಿಪೆಂಡೆನ್ಸ್ ಡೇ ಕಪ್' ಕ್ರಿಕೆಟ್ ಪಂದ್ಯಾವಳಿ

# ಕ್ರೀಡೆ ನಿತ್ಯ ಜೀವನದ ಅಂಗವಾಗಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಾನಸಿಕ, ದೈಹಿಕ ಆರೋಗ್ಯ, ನಿತ್ಯದ ಕೆಲಸದ ಒತ್ತಡ ನಿವಾರಣೆ, ಪರಸ್ಪರ ಸ್ನೇಹ, ಸೌಹಾರ್ದತೆ, ಬಾಂಧವ್ಯ ವೃದ್ಧಿಗಾಗಿ ಕ್ರೀಡಾಕೂಟಗಳು ವೇದಿಕೆಗಳಾಗಿವೆ ಎಂದು ತಹಸೀಲ್ದಾರ ವಾಸುದೇವ ಎಂ.ಸ್ವಾಮಿ ಹೇಳಿದರು.

ಅವರು ಪಟ್ಟಣದ ಉಮಾ ವಿದ್ಯಾಲಯ ಹೈಸ್ಕೂಲ್ ಮೈದಾನದಲ್ಲಿ ತಾಲೂಕು ಆಡಳಿತ, ವಿವಿಧ ಇಲಾಖೆಯ ಸಹಯೋಗದಲ್ಲಿ ಸ್ವಾತಂತ್ರ್ಯೋತ್ಸವದ ಅಂಗವಾಗಿ ಏರ್ಪಡಿಸಿದ್ದ ಇಂಡಿಪೆಂಡೆನ್ಸ್ ಡೇ ಕಪ್- ಕ್ರಿಕೆಟ್ ಪಂದ್ಯಾವಳಿ ಉದ್ಘಾಟಿಸಿ ಮಾತನಾಡುತ್ತಿದ್ದರು.

ಕ್ರೀಡಾಕೂಟಗಳು ಸೋಲು-ಗೆಲುವಿನ ಸ್ಪರ್ಧೆಯಾಗಿರದೇ ಇಲಾಖೆಗಳ ನೌಕರ ವರ್ಗದ ನಡುವೆ ಸಮನ್ವಯತೆ, ಸ್ನೇಹ, ಬಾಂಧವ್ಯ ಮೂಡಿಸುವುದಾಗಿದೆ.




ಕ್ರೀಡೆಗಳು ಎಲ್ಲರ ನಿತ್ಯ ಜೀವನದ ಅಂಗವಾಗಬೇಕು. ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುವುದು ಎಂದರು.

ಸಿಪಿಐ ನಾಗರಾಜ ಮಾಡಳ್ಳಿ ಮಾತನಾಡಿ, ಸ್ವಾತಂತ್ರೋತ್ಸವ ಆಚರಣೆ ನಿಮಿತ್ತ ವಿವಿಧ ಇಲಾಖೆಗಳ ನೌಕರರೆಲ್ಲರನ್ನೂ ಸೇರಿಸಿ ಕ್ರಿಕೆಟ್ ಪಂದ್ಯಾವಳಿ ಸಂಘಟಿಸಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದರು.

> ಪೊಲೀಸ್, ಕಂದಾಯ, ಶಿಕ್ಷಣ, ಪುರಸಭೆ, ತಾಲೂಕಾ ಪಂಚಾಯತ, ಕೆಪಿಟಿಸಿಎಲ್, ಕೆಎಸ್‌ಆರ್‌ಟಿಸಿ, ಆರೋಗ್ಯ, ಕೃಷಿ ಸೇರಿ ವಿವಿಧ ಇಲಾಖೆಗಳೊಂದಿಗೆ ಮಾಧ್ಯಮ ಸೇರಿ ಒಟ್ಟು 10 ತಂಡಗಳು ಈ ಪಂದ್ಯಾವಳಿಯಲ್ಲಿ ಸ್ಪರ್ಧಿಸಲಿವೆ. ಐಪಿಎಲ್ ರೀತಿಯಲ್ಲಿ ಪ್ರತಿ ತಂಡಕ್ಕೂ ವಿಶೇಷವಾದ ನಾಮಾಂಕಿತವನ್ನಿಟ್ಟು ಪ್ರತ್ಯೇಕ ಜರ್ಸಿ ಮಾಡಲಾಗಿದೆ. 10 ಓವರ್‌ಗಳ ಪಂದ್ಯದಲ್ಲಿ ನಿತ್ಯ 2 ತಂಗಳು ಸೆಣಸಲಿದ್ದು, 23 ಪಂದ್ಯಾವಳಿಗಳು ನಡೆದು ಆ.11ಕ್ಕೆ ಫೈನಲ್ ನಡೆಯಲಿದೆ.

ಶುಕ್ರವಾರ ಬೆಳಿಗ್ಗೆ ಪೊಲೀಸ್ ಪ್ಯಾಂಥರ್ಸ್ ಹಾಗೂ ಟಿಎಂಸಿ ಟೈಟಾನ್ಸ್ ನಡುವೆ ಉದ್ಘಾಟನೆ ಪಂದ್ಯಾವಳಿ ನಡೆದು ಪೊಲೀಸ್ ಪ್ಯಾಂಥರ್ಸ್ ಜಯ ಗಳಿಸಿತು. ಈ ವೇಳೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ, ಪುರಸಭೆ ಮುಖ್ಯಾದಿಕಾರಿ ಮಹೇಶ ಹಡಪದ, ಕೃಷಿ ಅಧಿಕಾರಿ ಚಂದ್ರಶೇಖರಗೌಡ ನರಸಮ್ಮನವರ, ಪಿಎಸ್‌ಐ ಈರಪ್ಪ ರಿತ್ತಿ, ವಿಜಯ ಪವಾರ, ಶಿಕ್ಷಣ ಇಲಾಖೆಯ ಈಶ್ವರ ಮೆಡ್ಲೇರಿ, ಡಿ.ಎಚ್. ಪಾಟೀಲ, ಬಿ.ಎಸ್. ಹರ್ಲಾಪುರ, ತಾಲೂಕಿನ ಹೆಸ್ಕಾಂ, ಸಾರಿಗೆ, ಕೃಷಿ, ಶಿಕ್ಷಣ, ಪೊಲೀಸ್, ಪುರಸಭೆ ಸೇರಿ ವಿವಿಧ ಇಲಾಖೆಯ ಅಧಿಕಾರಿಗಳು, ನೌಕರರು, ಸಿಬ್ಬಂದಿಗಳು ಹಾಗೂ ಮಾಧ್ಯಮ ಸ್ನೇಹಿತರಿದ್ದರು.

# ಸಾಂಸ್ಕೃತಿಕ ಪ್ರತಿಭೋತ್ಸವ ಆ.6ಕ್ಕೆ

■ವಿಜಯಸಾಕ್ಷಿ ಸುದ್ದಿ, ಕುಕನೂರು

ಇಲ್ಲಿನ ಕನ್ನಡ ಸಾಹಿತ್ಯ ಸಂಸ್ಕೃತಿ ಅಭಿವೃದ್ಧಿ ಟ್ರಸ್ಟ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ತಾಲೂಕಿನ ಇಟಗಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಆಗಸ್ಟ್ 6ರಂದು ಮಧ್ಯಾಹ್ನ 2ಕ್ಕೆ ಪುಸ್ತಕ-ಪತ್ರಿಕೆ ಸಂಸ್ಕೃತಿ ಅಭಿಯಾನ ಹಾಗೂ 8ನೇ ಮಕ್ಕಳ ಸಾಂಸ್ಕೃತಿಕ ಪ್ರತಿಭೋತ್ಸವ ಜರುಗಲಿದೆ.

ಆರ್.ಡಿ.ಟಿ ಸಂಸ್ಥೆಯ ಆಡಳಿತಾಧಿಕಾರಿ ನವೀನ ಕುಮಾರ್ ಗುಳಗಣ್ಣವರ್ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ. ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಲಿಂಗರಾಜ್ ಹೊಸಭಾವಿ ಅಧ್ಯಕ್ಷತೆ ವಹಿಸಲಿದ್ದಾರೆ. ಹಿರಿಯ ಪತ್ರಕರ್ತ ರಮೇಶ್ ಸುರ್ವೆ ಉಪನ್ಯಾಸ ನೀಡಲಿದ್ದಾರೆ.

ತಾ.ಪಂ ಮಾಜಿ ಅಧ್ಯಕ್ಷ ಕಳಕಪ್ಪ ಕಂಬಳಿ ಪ್ರಶಸ್ತಿ ಪ್ರದಾನ ಮಾಡುವರು. ಗ್ರಾ.ಪಂ ಅಧ್ಯಕ್ಷೆ ನಿರ್ಮಲಾ ಹಿರೇಮನಿ, ಸಾಹಿತಿ ಬಿ.ಎಂ. ಹಳ್ಳಿ, ತಾ.ಪಂ ಮಾಜಿ ಅಧ್ಯಕ್ಷ ಬಸವಪ್ರಭು ಪಾಟೀಲ್, ನಾಗರಾಜ್ ಉಮಚಗಿ, ಕಾ.ನಿ.ಪ ಸಂಘದ ಕಾರ್ಯದರ್ಶಿ ಬಸವರಾಜ್ ಕೊನಾರಿ, ಮುಖಂಡರಾದ ನೀಲನಗೌಡ ಹಳ್ಯಾಳ, ಕಳಕಪ್ಪ ಕುಂಬಾರ, ಎಚ್.ಎಚ್. ಕುರಿ, ಮಹೇಶ್ ದೊಡ್ಡಮನಿ, ಶ್ರೀಕಾಂತ ಪೂಜಾರ, ಶರಣಪ್ಪ ಕೆಳಗಿನಮನಿ, ಎನ್.ಸಿ. ಫಣಿ, ರಾಮು ಕೌದಿ, ಭೀಮಪ್ಪ ಮೀಸಿ ಮುಂತಾದವರು ಪಾಲ್ಗೊಳ್ಳುವರು.

ಮೇಘರಾಜ ಎಸ್.ಜಿಡಗಿ ಹಾಗೂ ಸ್ಥಳೀಯ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ಟ್ರಸ್ಟ್‌ನ ಅಧ್ಯಕ್ಷ ರುದ್ರಪ್ಪ ಭಂಡಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ್ರಜ್ವಲ್ ರೇವಣ್ಣ ಲೈಂಗಿಕ ಹಗರಣ

# 'ಅಶ್ಲೀಲ ವಿಡಿಯೋಗಳು ನೈಜ, ಮಾರ್ಫ್ ಮಾಡಿಲ್ಲ' ಎಂದ ಎಫ್‌ಎಸ್‌ಎಲ್ ವರದಿ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪ್ರಜ್ವಲ್ ರೇವಣ್ಣ ಲೈಂಗಿಕ ಹಗರಣ ಪ್ರಕರಣದಲ್ಲಿ ಪೆನ್‌ಡ್ರೈವ್‌ನಲ್ಲಿ ಪತ್ತೆಯಾಗಿರುವ ಅಶ್ಲೀಲ ವಿಡಿಯೋಗಳು ಅಧಿಕೃತವಾಗಿದ್ದು, ಯಾವುದೇ ರೀತಿಯ ಮಾರ್ಫ್ ಮಾಡಿಲ್ಲ ಎಂದು ವಿಧಿ ವಿಜ್ಞಾನ ಪ್ರಯೋಗಾಲಯವು ದೃಢಪಡಿಸಿದ ವರದಿಯನ್ನು ಎಸ್‌ಐಟಿ ತಂಡಕ್ಕೆ ನೀಡಿದೆ.

ಲೋಕಸಭೆ ಚುನಾವಣೆ ಸಂದರ್ಭದಲ್ಲಿ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರ ಜತೆ ನಂಟು ಹೊಂದಿರುವ ಪೆನ್‌ಡ್ರೈವ್‌ನ ಪೆನ್‌ಡ್ರೈವ್ ಹಾಸನ ಕ್ಷೇತ್ರದಲ್ಲಿ ಸಂಚಲನ ಮೂಡಿಸಿತ್ತು. ಪೆನ್‌ಡ್ರೈವ್ ಹಗರಣದ ತನಿಖೆಯನ್ನು ನಿಯೋಜಿಸಿದ ಎಸ್‌ಐಟಿ, ಅವುಗಳ ಸತ್ಯಾಸತ್ಯತೆಯನ್ನು ಪರಿಶೀಲಿಸಲು ವೀಡಿಯೊಗಳನ್ನು ಎಫ್‌ಎಸ್‌ಎಲ್‌ಗೆ ರವಾನಿಸಿತ್ತು.

ಎಫ್‌ಎಸ್‌ಎಲ್ ವರದಿಯ ಪ್ರಕಾರ, ವೀಡಿಯೊಗಳು ನಿಜವಾದವು ಮತ್ತು ಸ್ಪಷ್ಟವಾದ ವಿಷಯವನ್ನು ಬಿಂಬಿಸುತ್ತವೆ. ಇದಲ್ಲದೆ, ವೀಡಿಯೊಗಳಲ್ಲಿನ ವ್ಯಕ್ತಿಯ ದೈಹಿಕ ಗುಣಲಕ್ಷಣಗಳು ಆರೋಪಿ ಪ್ರಜ್ವಲ್ ರೇವಣ್ಣನ ಗುಣಲಕ್ಷಣಗಳನ್ನು ಹೋಲುತ್ತವೆ ಎಂದು ಎಫ್‌ಎಸ್‌ಎಲ್ ಗಮನಿಸಿದೆ ಎನ್ನಲಾಗಿದೆ. ಹೆಚ್ಚುವರಿ ಪರಿಶೀಲನೆಗಾಗಿ ಕೆಲವು ವೀಡಿಯೊಗಳು ಇನ್ನೂ ಪರಿಶೀಲನೆಯಲ್ಲಿವೆ ಎಂದು ವರದಿ ಸ್ಪಷ್ಟಪಡಿಸಿದೆ.

ಪ್ರಕರಣದ ತನಿಖೆಯನ್ನು ಚುರುಕುಗೊಳಿಸಿರುವ ಎಸ್‌ಐಟಿ, ಆಗಸ್ಟ್ ಅಂತ್ಯದೊಳಗೆ ಚಾರ್ಜ್ ಶೀಟ್ ಸಲ್ಲಿಸುವ ನಿರೀಕ್ಷೆಯಿದೆ. ಮೂರು ಅತ್ಯಾಚಾರ ಪ್ರಕರಣಗಳು ಮತ್ತು ವಿವಾದಾತ್ಮಕ ಪೆನ್ ಡ್ರೈವ್ ವಿತರಣೆಗೆ ಸಂಬಂಧಿಸಿದ ಒಂದು ಪ್ರಕರಣ ಸೇರಿದಂತೆ ಪ್ರಜ್ವಲ್ ರೇವಣ್ಣ ಅವರನ್ನು ಒಳಗೊಂಡ ನಾಲ್ಕು ಪ್ರಕರಣಗಳ ತನಿಖೆ ಪೂರ್ಣಗೊಂಡ ನಂತರ ಈ ಬೆಳವಣಿಗೆ ನಡೆದಿದೆ. ಅತ್ಯಾಚಾರ ಮತ್ತು ಅಶ್ಲೀಲ ವೀಡಿಯೊಗಳನ್ನು ಅನಧಿಕೃತವಾಗಿ ವಿತರಿಸಿದ ಆರೋಪದ ಮೇಲೆ ಪ್ರಜ್ವಲ್ ಮತ್ತು ಅವರ ಇಬ್ಬರು ಸಿಬ್ಬಂದಿ ಮತ್ತು ಮಾಜಿ ಗ್ರಾಮ ಪಂಚಾಯಿತಿ ಸದಸ್ಯರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ.

# ವಿಶೇಷಚೇತನರ ಆಶ್ರಯಧಾಮದ 13 ಮಕ್ಕಳು ನಿಗೂಢ ಸಾವು; ಪ್ರತಿಪಕ್ಷಗಳಿಂದ ಕಳಪೆ ನಿರ್ವಹಣೆ ಆರೋಪ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕಳೆದ 20 ದಿನಗಳಲ್ಲಿ ದೆಹಲಿ ಸರ್ಕಾರ ವಿಶೇಷಚೇತನರ ಆಶ್ರಯಧಾಮದಲ್ಲಿ 13 ಮಕ್ಕಳು ಸಾವನ್ನಪ್ಪಿದ್ದಾರೆ ಎಂದು ಉಪವಿಭಾಗೀಯ ಮ್ಯಾಜಿಸ್ಟ್ರೇಟ್ ತನಿಖೆಯಿಂದ ತಿಳಿದುಬಂದಿದೆ. ಇಲ್ಲಿಯವರೆಗೆ, ರೋಹಿಣಿಯಲ್ಲಿರುವ ಆಶಾ ಕಿರಣ್ ಆಶ್ರಯ ಮನೆಯಲ್ಲಿ ಜನವರಿಯಿಂದ 27 ಸಾವುಗಳು ವರದಿಯಾಗಿವೆ. 'ನಿರ್ಲಕ್ಷ್ಯ ಮತ್ತು ಕಳಪೆ ನಿರ್ವಹಣೆ' ಎಂದು ಬಿಜೆಪಿ ಎಂದು ಆರೋಪಿಸಿದೆ.

ಆಶಾಕಿರಣ್ ಆಶ್ರಯ ಮನೆಯಲ್ಲಿ ಸಾವಿಗೆ ಕಾರಣ ಇನ್ನೂ ತಿಳಿದುಬಂದಿಲ್ಲ. ಸಾವಿನ ಸಂಖ್ಯೆ ಕಳೆದ ವರ್ಷಕ್ಕಿಂತ ಹೆಚ್ಚಾಗಿದೆ ಎಂದು ಗಮನಿಸಿದ ಎಸ್‌ಡಿಎಂ, ಮರಣೋತ್ತರ ಪರೀಕ್ಷೆಯ ವರದಿಗಳ ನಂತರ ಸಾವಿನ ನಿಜವಾದ ಕಾರಣ ತಿಳಿಯಲಿದೆ ಎಂದು ಹೇಳಿದ್ದಾರೆ.

ಎಸ್‌ಡಿಎಂ ವರದಿಯು ಮಕ್ಕಳಿಗೆ ನೀಡುತ್ತಿರುವ ಕುಡಿಯುವ ನೀರಿನ ಗುಣಮಟ್ಟದ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ರಾಷ್ಟ್ರೀಯ ಮಹಿಳಾ ಆಯೋಗವು (ಎನ್‌ಸಿಡಬ್ಲ್ಯು) ಸತ್ಯಶೋಧನಾ ತಂಡವನ್ನು ಆಶ್ರಯ ಮನೆಗೆ ಕಳುಹಿಸಿದ್ದು, ಎಎಪಿ ಸರ್ಕಾರದ ನಿರ್ಲಕ್ಷ್ಯಕ್ಕಾಗಿ ವಾಗ್ದಾಳಿ ನಡೆಸಿದೆ.

"ವರ್ಷಗಳಿಂದ, ದೆಹಲಿ ಸರ್ಕಾರವು ನಡೆಸುತ್ತಿರುವ ಆಶಾ ಕಿರಣ್ ಆಶ್ರಯ ಮನೆ ಎಲ್ಲಾ ಭರವಸೆ ಕಳೆದುಕೊಂಡಿದೆ. ಅಲ್ಲಿ ನಿವಾಸಿಗಳು ಸಾಯುತ್ತಿದ್ದಾರೆ ಮತ್ತು ದೆಹಲಿ ಸರ್ಕಾರವು ಏನನ್ನೂ ಮಾಡುತ್ತಿಲ್ಲ. ಅರಿವು ತೆಗೆದುಕೊಂಡು ಅದರ ವಿಚಾರಣೆಗೆ ನನ್ನ ತಂಡವನ್ನು ಕಳುಹಿಸಲಾಗಿದೆ." ಎಂದು ಎನ್‌ಸಿಡಬ್ಲ್ಯೂ ಅಧ್ಯಕ್ಷೆ ರೇಖಾ ಶರ್ಮಾ ಹೇಳಿದರು.

ಎನ್‌ಸಿಡಬ್ಲ್ಯು ದೆಹಲಿ ಸರ್ಕಾರ ನಡೆಸುತ್ತಿರುವ ರಾತ್ರಿ ಆಶ್ರಯಗಳ ಲೆಕ್ಕಪರಿಶೋಧನೆಯನ್ನು ಸಹ ನಡೆಸುತ್ತಿದೆ ಎಂದು ಅವರು ಹೇಳಿದರು.

ದೆಹಲಿ ಸಚಿವೆ ಅತಿಶಿ ಪ್ರತಿಕ್ರಿಯಿಸಿ, ಸಾವಿನ ಸಂಖ್ಯೆಯ ಬಗ್ಗೆ ಭಿನ್ನಾಭಿಪ್ರಾಯ ವ್ಯಕ್ತಪಡಿಸಿದ್ದಾರೆ ಮತ್ತು ಮ್ಯಾಜಿಸ್ಟ್ರೇಟ್ ತನಿಖೆಯನ್ನು ಪ್ರಾರಂಭಿಸಲು, 48 ಗಂಟೆಗಳಲ್ಲಿ ವರದಿಯನ್ನು ಸಲ್ಲಿಸುವಂತೆ ಕಂದಾಯ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ (ಎಸಿಎಸ್) ಗೆ ಸೂಚಿಸಿದ್ದಾರೆ.

### ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ, ವಿಚಾರ ಸಂಕಿರಣ

# ವ್ಯಸನ ದೇಹ, ಆತ್ಮ ಎರಡನ್ನೂ ಸುಡುತ್ತದೆ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಇಲಕಲ್ಲ ಚಿತ್ತರಗಿ ಮಹಾಂತಮಠದ ಡಾ.ಮಹಾಂತ ಶಿವಯೋಗಿಗಳು ವ್ಯಸನಮುಕ್ತ ಸಮಾಜ ನಿರ್ಮಾಣಕ್ಕಾಗಿ ನಿರಂತರವಾಗಿ ಶ್ರಮಿಸಿದ್ದಾರೆ. ಡಾ. ಮಹಾಂತ ಶಿವಯೋಗಿಗಳು ತೋರಿದ ದಾರಿಯಲ್ಲಿ ಪ್ರತಿಯೊಬ್ಬರೂ ಸಾಗಿದರೆ ಆರೋಗ್ಯಕ ಸಮಾಜ ಹೊಂದಲು ಸಾಧ್ಯವಾಗುತ್ತದೆ ಎಂದು ಕರ್ನಾಟಕ ವಿಧಾನ ಪರಿಷತ್ತ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕರ್ನಾಟಕ ಮದ್ಯಪಾನ ಸಂಯಮ ಮಂಡಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಹಾಗೂ ಸುಧಾರಣೆ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಧಾರವಾಡ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನಗಳ ಸಂಸ್ಥೆಯ ಸಭಾಂಗಣದಲ್ಲಿ ಆಯೋಜಿಸಿದ್ದ ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಹಾಗೂ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದರು.

ದುಶ್ಚಟಗಳನ್ನು ಬಿಡುವುದರಿಂದ ದೈಹಿಕ ಆರೋಗ್ಯ ಸುಧಾರಣೆಯಾಗುತ್ತದೆ. ಜೊತೆಗೆ ಆರ್ಥಿಕವಾಗಿ ಸದೃಡರಾಗಲೂ ಸಾಧ್ಯವಿದೆ. ದುಶ್ಚಟಗಳಿಗೆ ದಾಸರಾಗಿ ನಿತ್ಯ ಕಣ್ಣೀರಿಡುವ ಕುಟುಂಬಗಳಿಗೆ ನೆಮ್ಮದಿ ಕಲ್ಪಿಸಿದ ಶ್ರೇಯಸ್ಸು ಮಹಾಂತ ಶಿವಯೋಗಿಗಳಿಗೆ ಸಲ್ಲುತ್ತದೆ. ವಿದ್ಯಾರ್ಥಿಗಳ ಜೀವನದಲ್ಲಿ ಮುಖ್ಯವಾದದ್ದು ಶಿಸ್ತು, ಸಂಯಮ ಮತ್ತು ಪ್ರಾಮಾಣಿಕತೆ. ಈ ಶಿಸ್ತನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಸಾಧನೆ ಮಾಡಲು ಸಾಧ್ಯವಾಗುತ್ತದೆ. ಬಹಳಷ್ಟು ವ್ಯಕ್ತಿಗಳು ವ್ಯಸನಗಳಿಂದ ತಾವಷ್ಟೇ ಹಾಳಾಗದೆ ಇಡೀ ಕುಟುಂಬವನ್ನೇ ನಾಶ ಮಾಡುತ್ತಾರೆ. ಬೆಂಕಿ ದೇಹ ಮಾತ್ರ ಸುಟ್ಟರೆ, ವ್ಯಸನ ದೇಹ ಮತ್ತು ಆತ್ಮ ಎರಡನ್ನೂ ಸುಡುತ್ತದೆ ಎಂದರು.

ಡಾ. ಮಹಾಂತ ಶಿವಯೋಗಿಗಳ ಭಿಕ್ಷೆ ಬೇಡುವ ಸ್ವರೂಪ ಭಿನ್ನವಾಗಿತ್ತು. ಬಹುತೇಕ ಸ್ವಾಮಿಜಿಗಳು ಗುರು ದಕ್ಷಿಣೆ, ಕಾಣಿಕೆಯಾಗಿ ಹಣ, ಕಾಳು, ಊಟ, ಕಟ್ಟಡ, ಕಾರು, ಭೂಮಿ ಕೇಳಿದರೆ, ಮಹಾಂತ ಅಪ್ಪಗಳು ತಮ್ಮ ಜೋಳಿಗೆ ಚಾಚಿ ನಿಮ್ಮ ವ್ಯಸನ, ದುಶ್ಚಟಗಳನ್ನು ದಾನ ಮಾಡಿ ಎಂದು ಕೇಳುತ್ತಿದ್ದರು. ಅನೇಕರು ಶ್ರೀಗಳ ಜೋಳಿಗೆಗೆ ಸರಾಯಿ ಬಾಟಲ್, ಗುಟಕಾ ಚೀಟಿ, ಬೀಡಿ, ಸಿಗರೇಟು, ತಂಬಾಕು ಸೇರಿದಂತೆ ವಿವಿಧ ವಸ್ತುಗಳನ್ನು ಹಾಕಿ, ಭಕ್ತಿಯಿಂದ ಶ್ರೀಗಳಿಗೆ ನಮಿಸುತ್ತಿದ್ದರು. ಅನೇಕರು ತಮ್ಮ ಚಟಗಳನ್ನು ಬಿಟ್ಟು ಮಠದ ಭಕ್ತರಾಗಿದ್ದನ್ನು ನೋಡಿದ್ದೇವೆ ಎಂದು ಸಭಾಪತಿಗಳು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಮಾತನಾಡಿ, ಇಲಕಲ್ಲ ಮಹಾಂತ ಅಪ್ಪಗಳನ್ನು ಬಾಲ್ಯದಿಂದಲೇ ನೋಡಿದ್ದೇನೆ. ಅವರ ಕ್ರಾಂತಿಕಾರಿ ನಡೆ ಅಂದಿನ ಹಳ್ಳಿಗಳಲ್ಲಿ ಸಂಚಲನ ಮೂಡಿಸಿತ್ತು. ಹರಿಜನ, ಗಿರಿಜನ ಕೇರಿ, ಕೊಳಚೆ ಪ್ರದೇಶ, ಪಟ್ಟಣ, ಹಳ್ಳಿಗಳ ಬೇಧವಿಲ್ಲದೆ ಎಲ್ಲ ಕಡೆಗೂ ಮಹಾಂತ ಜೋಳಿಗೆಯೊಂದಿಗೆ ಸಂಚರಿಸಿ, ಜನರಲ್ಲಿ ವ್ಯಸನಗಳ ಬಗ್ಗೆ ಅರಿವು ಮೂಡಿಸುತ್ತಿದ್ದರು ಎಂದು ಹೇಳಿದರು.

ಶಾಲಾ ಶಿಕ್ಷಣ ಇಲಾಖೆ ಇಲಾಖೆ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ ಮಾತನಾಡಿ, ಅನೇಕ ಕಡೆಗಳಲ್ಲಿ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ದುಶ್ಚಟಗಳಿಗೆ ಒಳಗಾಗಿದ್ದಾರೆ ಎಂಬ ಆರೋಪಗಳಿವೆ. ಆದ್ದರಿಂದ ಇಡೀ ಶೈಕ್ಷಣಿಕ ವಲಯವನ್ನು ವ್ಯಸನಮುಕ್ತಗೊಳಿಸಿ, ಶುದ್ಧೀಕರಿಸುವ ಅಗತ್ಯವಿದೆ ಎಂದು ಅನೇಕರು ಅಭಿಪ್ರಾಯಪಟ್ಟಿದ್ದಾರೆ. ಶಿಕ್ಷಕರಿಗೆ, ಮಕ್ಕಳಿಗೆ ಅರಿವು ಮೂಡಿಸುವ, ಜಾಗೃತಿ ಹೆಚ್ಚಿಸುವ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಡಿಮ್ಹಾನ್ಸ್ ಸಂಸ್ಥೆಯ ಟೆಲಿಮಾನಸ್ ವಿಭಾಗದ ಸಹಾಯಕ ಪ್ರಾಧ್ಯಾಪಕ, ಮನೋವೈದ್ಯ ಡಾ. ಸುಧೀಂದ್ರ ಹುದ್ದಾರ ಉಪನ್ಯಾಸ ನೀಡಿದರು. ಧಾರವಾಡ ಮಾನಸಿಕ ಆರೋಗ್ಯ ಹಾಗೂ ನರ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕ ಡಾ.ಅರುಣಕುಮಾರ ಸಿ ಅಧ್ಯಕ್ಷತೆಯನ್ನು, ಮನಗುಂಡಿ ಗುರುಮಹಾಮನೆಯ ಬಸವಾನಂದ ಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಶುಭಾ ಪಿ., ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಶಶಿ ಪಾಟೀಲ ವೇದಿಕೆಯಲ್ಲಿದ್ದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವಾರ್ತಾ ಸಹಾಯಕ ಅಧಿಕಾರಿ ಡಾ.ಸುರೇಶ ಹಿರೇಮಠ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಡಿಮ್ಹಾನ್ಸ್ ಸಹಾಯಕ ಪ್ರಾಧ್ಯಾಪಕ ಡಾ.ಮಂಜುನಾಥ ಭಜಂತ್ರಿ ಅತಿಥಿಗಳ ಪರಿಚಯಿಸಿದರು. ಅಧ್ಯಾಪಕ ಪ್ರಶಾಂತ ಪಾಟೀಲ ಕಾರ್ಯಕ್ರಮ ನಿರೂಪಿಸಿದರೆ, ಅಶೋಕ ಕೋರಿ ವಂದಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಗೋಪಾಲ ಬ್ಯಾಕೋಡ ಮಾತನಾಡಿ, ಸಣ್ಣ ವಯಸ್ಸಿನ ಮಕ್ಕಳು ಗಾಂಜಾ, ಡ್ರಗ್ಸ್‌ನಂತಹ ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ. ಇವರಿಗೆ ಪಾಲಕರು ಇತರರು ಸರಿಯಾಗಿ ಗಮನಿಸದೇ ಇರುವುದು ಕಾರಣವಾಗಿದೆ. ಪಾಲಕರು ಮಕ್ಕಳ ಪಾಲನೆ ಬಗ್ಗೆ ಜವಾಬ್ದಾರಿಯಿಂದ ವರ್ತಿಸಬೇಕೆಂದು ಹೇಳಿದರು.

# ಮಣಿಪುರ ಗಲಭೆ: ಜಿರಿಬಾಮ್‌ನಲ್ಲಿ ಶಾಂತಿ ಮರುಸ್ಥಾಪನೆಗೆ ಮೈತೆಯಿ-ಹ್ಮಾರ್ ಸಮುದಾಯಗಳ ಒಪ್ಪಿಗೆ



■ವಿಜಯಸಾಕ್ಷಿ ಸುದ್ದಿ, ಮಣಿಪುರ

ಹಿಂಸಾಚಾರದಿಂದ ನಲುಗಿರುವ ಜಿರಿಬಾಮ್ ಜಿಲ್ಲೆಯಲ್ಲಿ ಸಹಜ ಸ್ಥಿತಿಗೆ ಮರಳಲು ಸಂಘಟಿತ ಪ್ರಯತ್ನಗಳನ್ನು ಮಾಡಲು ಮೈತೆಯಿ ಮತ್ತು ಹ್ಮಾರ್ ಸಮುದಾಯಗಳ ಪ್ರತಿನಿಧಿಗಳು ಒಪ್ಪಂದಕ್ಕೆ ಬಂದಿದ್ದಾರೆ. ಗುರುವಾರ ಅಸ್ಸಾಂನ ಕ್ಯಾಚಾರ್‌ನಲ್ಲಿರುವ ಸಿಆರ್‌ಪಿಎಫ್ ಸೌಲಭ್ಯದಲ್ಲಿ ನಡೆದ ಸಭೆಯಲ್ಲಿ ಈ ಒಪ್ಪಂದಕ್ಕೆ ಬರಲಾಯಿತು.

ಜಿರಿಬಾಮ್ ಜಿಲ್ಲಾ ಆಡಳಿತ, ಅಸ್ಸಾಂ ರೈಫಲ್ಸ್ ಮತ್ತು ಸಿಆರ್‌ಪಿಎಫ್ ಸಿಬ್ಬಂದಿಯಿಂದ ನಡೆಸಲಾದ ಸಭೆಯಲ್ಲಿ ಜಿರಿಬಾಮ್ ಜಿಲ್ಲೆಯ ಥಾಡೌ, ಪೈಟೆ ಮತ್ತು ಮಿಜೋ ಸಮುದಾಯಗಳ ಪ್ರತಿನಿಧಿಗಳೂ ಇದ್ದರು.

ಸಭೆಯ ನಂತರ ಬಿಡುಗಡೆಯಾದ ಜಂಟಿ ಹೇಳಿಕೆಯು ಸಹಜತೆಯನ್ನು ತರಲು, ಬೆಂಕಿ ಮತ್ತು ಗುಂಡಿನ ಘಟನೆಗಳನ್ನು ತಡೆಯಲು ಸಂಪೂರ್ಣ ಪ್ರಯತ್ನಗಳನ್ನು ಮಾಡಲು ಎರಡೂ ಕಡೆಯವರು ಬದ್ಧರಾಗಿದ್ದಾರೆ ಎಂದು ದೃಢಪಡಿಸಿದರು. ಎರಡೂ ಪಕ್ಷಗಳು ಈ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ಭದ್ರತಾ ಪಡೆಗಳೊಂದಿಗೆ ಸಂಪೂರ್ಣವಾಗಿ ಸಹಕರಿಸಲು ಮತ್ತು ನಿಯಂತ್ರಿತ, ಸಂಘಟಿತ ಚಲನೆಯನ್ನು ಸುಗಮಗೊಳಿಸಲು ಪ್ರತಿಜ್ಞೆ ಮಾಡಿದ್ದಾರೆ. ಮುಂದಿನ ಸಭೆಯನ್ನು ಆಗಸ್ಟ್ 15 ರಂದು ನಿಗದಿಪಡಿಸಲಾಗಿದೆ.

ಹಿಂಸಾಚಾರವು 200 ಕ್ಕೂ ಹೆಚ್ಚು ಸಾವುಗಳಿಗೆ ಕಾರಣವಾಯಿತು ಮತ್ತು ಸಾವಿರಾರು ಜನರನ್ನು ನಿರಾಶ್ರಿತರನ್ನಾಗಿ ಮಾಡಿದೆ. ಇಂಫಾಲ್ ಕಣಿವೆ ಮೂಲದ ಮೈತೆಯಿ ಮತ್ತು ಪಕ್ಕದ ಬೆಟ್ಟಗಳ ಕುಕಿ-ಜೋ ಗುಂಪುಗಳ ನಡುವೆ ಕಳೆದ ವರ್ಷ ಮೇ ತಿಂಗಳಿನಿಂದ ಭುಗಿಲೆದ್ದಿತು.

ಜಿರಿಬಾಮ್ ಜಿಲ್ಲೆ ಈ ಹಿಂದೆ ಸಂಘರ್ಷದಿಂದ ಹೆಚ್ಚು ಸಂಕಷ್ಟಕ್ಕೆ ಒಳಗಾಗಿದೆ. ಜೂನ್‌ನಲ್ಲಿ ರೈತನ ವಿರೂಪಗೊಂಡ ದೇಹವನ್ನು ಪತ್ತೆ ಮಾಡಿದ ನಂತರ ಹಿಂಸಾಚಾರವನ್ನು ಅನುಭವಿಸಿದರು. ಇದು ಬೆಂಕಿಗೆ ಕಾರಣವಾಯಿತು ಮತ್ತು ಸಾವಿರಾರು ಜನರು ಪರಿಹಾರ ಶಿಬಿರಗಳಿಗೆ ಸ್ಥಳಾಂತರಿಸಬೇಕಾಯಿತು.

# ವಯನಾಡ್ ಭೂಕುಸಿತ | ಕಾಂಗ್ರೆಸ್‌ನಿಂದ 100 ಮನೆಗಳ ನಿರ್ಮಾಣ : ರಾಹುಲ್ ಗಾಂಧಿ



■ವಿಜಯಸಾಕ್ಷಿ ಸುದ್ದಿ, ವಯನಾಡ್

ವಯನಾಡ್ ಭೂಕುಸಿತದಿಂದ ಸಂತ್ರಸ್ತರಾದ ಜನರ ಪುನರ್ವಸತಿಗಾಗಿ ಕಾಂಗ್ರೆಸ್ ಕುಟುಂಬವು 100ಕ್ಕೂ ಹೆಚ್ಚು ಮನೆಗಳನ್ನು ನಿರ್ಮಿಸಲಿದೆ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ಮತ್ತು ವಯನಾಡ್‌ನ ಮಾಜಿ ಸಂಸದ ರಾಹುಲ್ ಗಾಂಧಿ ಹೇಳಿದ್ದಾರೆ.

ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಮತ್ತು ಇತರ ಹಿರಿಯ ಕಾಂಗ್ರೆಸ್ ನಾಯಕರೊಂದಿಗೆ ವಯನಾಡ್ ಜಿಲ್ಲಾಡಳಿತ ಮತ್ತು ಪಂಚಾಯತ್‌ನ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ನಂತರ ರಾಹುಲ್ ಸುದ್ದಿಗಾರರೊಂದಿಗೆ ಮಾತನಾಡಿದರು.

ಸಭೆಯಲ್ಲಿ ಸಾವಿನ ಸಂಖ್ಯೆ, ನಾಶವಾದ ಮನೆಗಳು ಮತ್ತು ಜನರನ್ನು ಹುಡುಕಲು ಮತ್ತು ರಕ್ಷಿಸಲು ಕೈಗೊಂಡ ಕಾರ್ಯತಂತ್ರಗಳ ಬಗ್ಗೆ ಅಧಿಕಾರಿಗಳು ರಾಹುಲ್ ಗಾಂಧಿಗೆ ವಿವರಿಸಿದರು.

ನಂತರ ಮಾತನಾಡಿದ ರಾಹುಲ್ ಗಾಂಧಿ, "ಭೂಕುಸಿತವು ಕೇರಳ ಹಿಂದೆಂದೂ ಕಂಡಿರದ ಭೀಕರ ದುರಂತ. ಆದ್ದರಿಂದ ಇದನ್ನು ವಿಭಿನ್ನ ರೀತಿಯ ದುರಂತವೆಂದು ಪರಿಗಣಿಸಬೇಕಾಗಿದೆ. ಈ ವಿಚಾರವನ್ನು ಕೇಂದ್ರ ಹಾಗೂ ಕೇರಳ ಸರ್ಕಾರದೊಂದಿಗೆ ಪ್ರಸ್ತಾಪಿಸಲಾಗುವುದು" ಎಂದರು.

"ಬದುಕುಳಿದವರಲ್ಲಿ ಹೆಚ್ಚಿನವರು ಭೂಕುಸಿತ ಪೀಡಿತ ಪ್ರದೇಶಗಳಿಗೆ ಮರಳಲು ಬಯಸುವುದಿಲ್ಲ ಎಂದು ತಿಳಿಸಿದ್ದಾರೆ. ಹೀಗಾಗಿ, ಅವರಿಗೆ ಸುರಕ್ಷಿತ ಪ್ರದೇಶದಲ್ಲಿ ಪುನರ್ವಸತಿ ಕಲ್ಪಿಸಬೇಕು" ಎಂದು ಹೇಳಿದರು.

ರಾಹುಲ್ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ಭೂಕುಸಿತ ದುರಂತ ಸಂಭವಿಸಿದ ಚೂರಲ್ಮಲಾ ಮತ್ತು ಮುಂಡಕ್ಕೈ ಪ್ರದೇಶಗಳಿಗೆ ನಿನ್ನೆ ಭೇಟಿ ನೀಡಿದ್ದರು. ಇಂದು ಕೂಡ ಅವರು ದುರಂತ ಪ್ರದೇಶಗಳಿಗೆ ತೆರಳಿ ಪರಿಸ್ಥಿತಿ ವೀಕ್ಷಿಸಿದರು ಮತ್ತು ಪರಿಹಾರ ಶಿಬಿರಗಳಲ್ಲಿ ಬದುಕುಳಿದವರೊಂದಿಗೆ ಸಂವಾದ ನಡೆಸಿದರು.

# ಜೀವ-ವೈದ್ಯಕೀಯ ವಿಮಾ ಕಂತುಗಳ ಮೇಲಿನ ಜಿಎಸ್‌ಟಿ ಹಿಂಪಡೆಯುವಂತೆ ಮಮತಾ ಆಗ್ರಹ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಜೀವ ಮತ್ತು ವೈದ್ಯಕೀಯ ವಿಮಾ ಕಂತುಗಳ ಮೇಲಿನ ಜಿಎಸ್‌ಟಿಯನ್ನು ಹಿಂಪಡೆಯುವಂತೆ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

"ಇದು ಜನರ ಪ್ರಮುಖ ಅಗತ್ಯಗಳನ್ನು ನೋಡಿಕೊಳ್ಳುವ ಸಾಮರ್ಥ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ" ಎಂದು ಹೇಳಿದ ಅವರು, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಬಜೆಟ್‌ನಲ್ಲಿ ಘೋಷಿಸಿದ ಕ್ರಮವನ್ನು ಟೀಕಿಸಿದ್ದಾರೆ.

ಈ ಬಗ್ಗೆ ಹಣಕಾಸು ಸಚಿವರಿಗೆ ಬರೆದ ಪತ್ರದಲ್ಲಿ, ಬ್ಯಾನರ್ಜಿ ಅವರು "ಕೇಂದ್ರವು ಸ್ವಭಾವದಲ್ಲಿ ಹೆಚ್ಚು ಜನ ವಿರೋಧಿ ನೀತಿಯನ್ನು ಪರಿಶೀಲಿಸಬೇಕು" ಎಂದು ವಿನಂತಿಸಿದ್ದಾರೆ.

"ಜೀವ ಮತ್ತು ಆರೋಗ್ಯ ವಿಮೆಯ ಪ್ರಾಥಮಿಕ ಉದ್ದೇಶವು ಅನಿರೀಕ್ಷಿತ ಸಮಯದಲ್ಲಿ ಆರ್ಥಿಕ ಭದ್ರತೆಯನ್ನು ಒದಗಿಸುವುದು. ಅಂತಹ ಸವಾಲಿನ ಸಮಯದಲ್ಲಿ ವ್ಯಕ್ತಿಗಳು ಮತ್ತು ಅವರ ಕುಟುಂಬಗಳು ಕಷ್ಟಗಳನ್ನು ನಿಭಾಯಿಸಲು ಸಮರ್ಥರಾಗಿದ್ದಾರೆ ಎಂದು ಖಚಿತಪಡಿಸಿಕೊಳ್ಳುವಲ್ಲಿ ಈ ನೀತಿಗಳು ನಿರ್ಣಾಯಕ ಪಾತ್ರವನ್ನು ವಹಿಸುತ್ತವೆ. ಆದಾಗ್ಯೂ, ವಿಮೆಯ ಪ್ರೀಮಿಯಂ ಮೇಲೆ ಜಿಎಸ್‌ಟಿ ಹೇರಿಕೆ ಸಾಮಾನ್ಯ ಜನರ ಮೇಲೆ ಆರ್ಥಿಕ ಹೊರೆಯನ್ನು ಹೆಚ್ಚಿಸುತ್ತದೆ" ಎಂದು ಅವರು ಹೇಳಿದರು.

# ಮೈಸೂರು ಚಲೋ ಪಾದಯಾತ್ರೆಯಲ್ಲಿ ಗದಗ ಜಿಲ್ಲಾ ಬಿಜೆಪಿ ಭಾಗಿ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ರಾಜ್ಯ ಘಟಕದ ವತಿಯಿಂದ ರಾಜ್ಯದ ಭ್ರಷ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವಾಯ್. ವಿಜಯೇಂದ್ರ, ವಿಧಾನಸಭಾ ವಿರೋಧ ಪಕ್ಷದ ನಾಯಕರಾದ ಆರ್.ಅಶೋಕ, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಪ್ರಲ್ಹಾದ ಜೋಶಿ ನೇತೃತ್ವದಲ್ಲಿ ಮೈಸೂರು ಚಲೋ ಪಾದಯಾತ್ರೆಯು ಆ.3ರಂದು ಬೆಂಗಳೂರಿನಿಂದ ಪ್ರಾರಂಭವಾಗಲಿದೆ.

ಈ ಕಾರ್ಯಕ್ರಮಕ್ಕೆ ಗದಗ ಜಿಲ್ಲೆಯಿಂದ ಶಾಸಕ ಸಿ.ಸಿ. ಪಾಟೀಲ, ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಸಚಿವ ಕಳಕಪ್ಪ ಬಂಡಿ, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ ನೇತೃತ್ವದಲ್ಲಿ ಪಕ್ಷದ ಎಲ್ಲ ಪದಾಧಿಕಾರಿಗಳು, ಕಾರ್ಯಕರ್ತರು, ಮುಖಂಡರು ಪಾಲ್ಗೊಳ್ಳುತ್ತಿದ್ದು, ಈ ಪಾದಯಾತ್ರೆಯಲ್ಲಿ ಗದಗ ಜಿಲ್ಲೆಯ ಎಲ್ಲ ಪ್ರಮುಖರು ಭಾಗವಹಿಸುವರು ಎಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು)ಕುರುಡಗಿ ತಿಳಿಸಿದ್ದಾರೆ.

# ಕೇರಳ ಭೂಕುಸಿತ: ಅನಾಥ ಮಗುವನ್ನು ದತ್ತು ತೆಗೆದುಕೊಳ್ಳಲು ಮುಂದಾದ ವಯನಾಡಿನ ದಂಪತಿ



■ವಿಜಯಸಾಕ್ಷಿ ಸುದ್ದಿ, ವಯನಾಡ

ವಯನಾಡಿನಲ್ಲಿ ಇತ್ತೀಚೆಗೆ ಸಂಭವಿಸಿದ ಭೂಕುಸಿತದ ಪ್ರದೇಶದಿಂದ ನಿಮಿಷಕ್ಕೊಂದು ನೋವಿನ ಕಥೆಗಳು ಕೇಳಿಬರುತ್ತಿರುವ ನಡುವೆ ಮಾನವೀಯ ವಿಚಾರವೊಂದು ಮಾಧ್ಯಮಗಳಲ್ಲಿ ಸುದ್ದಿಯಾಗಿದೆ. ಪ್ರವಾಹದಲ್ಲಿ ಅನಾಥವಾಗಿದ್ದ ಮಗುವನ್ನು ದತ್ತು ತೆಗೆದುಕೊಳ್ಳಲು ನಾಲ್ಕು ಮಕ್ಕಳನ್ನು ಹೊಂದಿರುವ ದಂಪತಿಗಳು ಮುಂದೆ ಬಂದಿದ್ದಾರೆ ಎಂದು 'ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್' ವರದಿ ಮಾಡಿದೆ.

ಜುಲೈ 30ರ ಬೆಳಿಗ್ಗೆ ವಯನಾಡ್‌ನಲ್ಲಿ ಸಂಭವಿಸಿದ ಭೂಕುಸಿತಗಳು 300ಕ್ಕೂ ಹೆಚ್ಚು ಜೀವಗಳನ್ನು ಬಲಿ ತೆಗೆದುಕೊಂಡಿದ್ದು, 200 ಕ್ಕೂ ಹೆಚ್ಚು ಜನರಿಗಾಗಿ ತೀವ್ರ ಶೋಧ ನಡೆಯುತ್ತಿದೆ ಎಂದು ವರದಿಯಾಗಿದೆ.

ದುರಂತದ ಹಿನ್ನೆಲೆಯಲ್ಲಿ, ಇಡುಕ್ಕಿಯ ಮಹಿಳೆ ಭಾವನಾ ಸಜಿನ್ ಅವರು ಭೂಕುಸಿತ ಪೀಡಿತ ಪ್ರದೇಶದಲ್ಲಿ ಅನಾಥ ನವಜಾತ ಶಿಶುಗಳಿಗೆ ಹಾಲುಣಿಸಲು ಸಾಮಾಜಿಕ ಮಾಧ್ಯಮಗಳ ಮೂಲಕ ಸ್ವಯಂಪ್ರೇರಿತರಾಗಿದ್ದರು. ಭಾವನಾ ಅವರ ಘೋಷಣೆಯ ಬೆನ್ನಲ್ಲೇ, ವಯನಾಡ್‌ನ ದಂಪತಿಗಳು ವಿಪತ್ತು ವಲಯದಿಂದ ಅನಾಥ ಮಗುವನ್ನು ದತ್ತು ತೆಗೆದುಕೊಳ್ಳಲು ಸಿದ್ಧರಿದ್ದಾರೆ ಎಂದು ಘೋಷಿಸಿದರು.

# ಡೀನ್ ಕಚೇರಿಯಿಂದ ಜಿಗಿದು ಸಾವಿಗೆ ಶರಣಾದ ವೈದ್ಯಕೀಯ ವಿದ್ಯಾರ್ಥಿನಿ

■ವಿಜಯಸಾಕ್ಷಿ ಸುದ್ದಿ, ಮಹಾರಾಷ್ಟ್ರ

ಮಹಾರಾಷ್ಟ್ರದ ವಾರ್ಧಾ ಜಿಲ್ಲೆಯ ಖಾಸಗಿ ವೈದ್ಯಕೀಯ ಕಾಲೇಜಿನ ದ್ವಿತೀಯ ವರ್ಷದ ಎಂಬಿಬಿಎಸ್ ವಿದ್ಯಾರ್ಥಿನಿ ಹಾಜರಾತಿ ಸಮಸ್ಯೆಯ ಕಾರಣದಿಂದ ಡೀನ್ ಕಚೇರಿಯಿಂದ ಜಿಗಿದು ಸಾವನ್ನಪ್ಪಿದ್ದಾಳೆ ಎಂದು ಅಧಿಕಾರಿಯೊಬ್ಬರು ಶುಕ್ರವಾರ ತಿಳಿಸಿದ್ದಾರೆ.

ಸಾವಂಗಿಯಲ್ಲಿರುವ ದತ್ತಾ ಮೇಘೆ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಗೆ ಸಂಯೋಜಿತವಾಗಿರುವ ಜವಾಹರಲಾಲ್ ನೆಹರು ವೈದ್ಯಕೀಯ ಕಾಲೇಜಿನ ವಿದ್ಯಾರ್ಥಿ ಗುರುವಾರ ಮಧ್ಯಾಹ್ನ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಅವರು ಹೇಳಿದರು.

20ರ ಹರೆಯದ ವೈದ್ಯಕೀಯ ವಿದ್ಯಾರ್ಥಿನಿ ನಾಗ್ಪುರದವರು ಎಂದು ಸಾವಂಗಿ ಪೊಲೀಸ್ ಠಾಣೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಪ್ರಾಥಮಿಕ ತನಿಖೆಯನ್ನು ಉಲ್ಲೇಖಿಸಿ, ಯುವತಿಗೆ ತನ್ನ ಹಾಜರಾತಿಯ ಕಡಿಮೆ ಇತ್ತು ಎನ್ನುವ ಕಾರಣಕ್ಕೆ ಕೆಲವು ಪರೀಕ್ಷೆಗಳನ್ನು ತೆಗೆದುಕೊಳ್ಳಲು ಕಾಲೇಜು ಅನುಮತಿಸಲಿಲ್ಲ ಎಂದು ಅಧಿಕಾರಿ ಹೇಳಿದರು.

ಕಾಲೇಜು ಡೀನ್‌ನ ನಾಲ್ಕನೇ ಮಹಡಿಯ ಕಚೇರಿಯಿಂದ ಜಿಗಿದ ಆಕೆ ತಲೆಗೆ ತೀವ್ರ ಪೆಟ್ಟಾಗಿ ಸಾವನ್ನಪ್ಪಿದ್ದಾಳೆ ಎಂದು ಪೊಲೀಸರು ಆಕಸ್ಮಿಕ ಸಾವು ಎಂದು ಪ್ರಕರಣ ದಾಖಲಿಸಿಕೊಂಡಿದ್ದಾರೆ.

### ವಿಶ್ವ ಸ್ತನ್ಯಪಾನ ಮಹಿಳಾ ಜಾಗೃತಿ ಕಾರ್ಯಕ್ರಮದಲ್ಲಿ ಡಾ. ರೇಶ್ಮೆ ಅಭಿಮತ

# ಮಗು ಜನಿಸಿದಾಕ್ಷಣ ತಾಯಿಯ ಹಾಲುಣಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ತನ್ಯಪಾನದಿಂದ ತಾಯಿ ಮತ್ತು ಮಗುವಿನ ಬಾಂಧವ್ಯ ಗಟ್ಟಿಗೊಳ್ಳುತ್ತದೆ. ಮಗುವಿಗೆ ಎದೆಹಾಲು ಉಣಿಸುವುದರಿಂದ ಸಾಕಷ್ಟು ರೋಗಗಳನ್ನು ತಪ್ಪಿಸಬಹುದು. ಜೊತೆಗೆ ತಾಯಿ ಮತ್ತು ಮಗುವಿನ ಆರೋಗ್ಯದಲ್ಲಿ ಸದೃಢತೆಯನ್ನೂ ಕಾಣಬಹುದಾಗಿದೆ ಎಂದು ಗದುಗಿನ ಪ್ರಸೂತಿ ಮತ್ತು ಸ್ತ್ರೀರೋಗತಜ್ಞ ಡಾ. ಶಶಿಧರ ರೇಶ್ಮೆ ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ನಗರದ ಡಾ.ಉದಯ ಕುಲಕರ್ಣಿ ಹೆರಿಗೆ ಆಸ್ಪತ್ರೆಯ ಆವರಣದಲ್ಲಿ ಗದಗ ಐಎಂಎದಿಂದ ಏರ್ಪಡಿಸಿದ್ದ 'ವಿಶ್ವ ಸ್ತನ್ಯಪಾನ ಸಪ್ತಾಹ'ದ ಮಹಿಳಾ ಜಾಗೃತಿ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದರು.



ಹೆರಿಗೆಯಾದ ಒಂದು ಗಂಟೆಯೊಳಗಿನ ಅವಧಿಯನ್ನು ವೈದ್ಯಕೀಯ ಕ್ಷೇತ್ರದಲ್ಲಿ ಸುವರ್ಣ ಘಳಿಗೆ ಎಂದು ಬಣ್ಣಿಸಲಾಗುತ್ತಿದೆ. ತಾಯಿಯ ಹಾಲು ಅಮೃತಕ್ಕೆ ಸಮಾನ, ಎದೆ ಹಾಲು ಕುಡಿದ ಮಗು ಯಾವುದೇ ತೊಂದರೆ ಇಲ್ಲದೆ ಸರ್ವಾಂಗೀಣ ಅಭಿವೃದ್ಧಿ ಹೊಂದಿಬಲ್ಲದು. ಆದ್ದರಿಂದ ಮಗು ಜನಿಸಿದ ತಕ್ಷಣ ತಾಯಿಯ ಹಾಲು ಉಣಿಸಬೇಕು. ಇದು ಉತ್ತಮ ರೋಗ ನಿರೋಧಕವಾಗಿದ್ದು, ಮಗುವಿನ ಬೆಳವಣಿಗೆಗೆ ಹೆಚ್ಚು ಶಕ್ತಿದಾಯಕ ಮತ್ತು ಹೆಚ್ಚು ಪರಿಣಾಮಕಾರಿ ಎಂದರು.

ಅಧ್ಯಕ್ಷತೆ ವಹಿಸಿದ್ದ ಡಾ.ಉದಯ ಕುಲಕರ್ಣಿ ಮಾತನಾಡಿ, ತಾಯಿ-ಮಗುವಿನ ಬಾಂಧವ್ಯವನ್ನು ಹಾಗೂ ಸ್ತನ್ಯಪಾನದ ಮಹತ್ವವನ್ನು ತಿಳಿಸಿದರು. ಪ್ರಸೂತಿ ಮತ್ತು ಸ್ತ್ರೀರೋಗತಜ್ಞ ಡಾ. ರಾಧಿಕಾ ಕುಲಕರ್ಣಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಪ್ರತಿ ವರ್ಷ ಸ್ತನ್ಯಪಾನದ ಬಗ್ಗೆ ತಜ್ಞ ವೈದ್ಯರನ್ನು ಆಮಂತ್ರಿಸಿ ಮಹಿಳೆಯರಿಗೆ ತಿಳುವಳಿಕೆ ನೀಡುವ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುತ್ತ ಬರಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮಹಿಳೆಯರು ಹಾಗೂ ಆಸ್ಪತ್ರೆಯ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

ತಾಯಂದಿರು ಮೂಢನಂಬಿಕೆ, ಅಂಧಶ್ರದ್ಧೆಗಳಿಗೆ ಬಲಿಯಾಗಬಾರದು. ಇಂದಿನ ಆಧುನಿಕ ದಿನಗಳಲ್ಲಿ ಕೆಲ ಮಹಿಳೆಯರು ಮಗುವಿಗೆ ಹಾಲುಣಿಸಿದರೆ ತಮ್ಮ ಸೌಂದರ್ಯ ಕುಂದುವದು ಎಂಬ ಭಾವನೆ ಹೊಂದಿದ್ದಾರೆ. ಇದನ್ನು ವೈದ್ಯಕೀಯ ರಂಗ ಒಪ್ಪುವುದಿಲ್ಲ. ಮಗುವಿಗೆ ಹಾಲುಣಿಸಿದರೆ ಸಹಜವಾಗಿಯೇ ಮಹಿಳೆಯರ ಸೌಂದರ್ಯ ಇನ್ನಷ್ಟು ವೃದ್ಧಿಸುತ್ತದೆ. ಮೊದಲ ಬಾರಿಗೆ ತಾಯಿತಾದವರು ಮಗುವಿಗೆ ಹಾಲುಣಿಸುವ ಸರಿಯಾದ ಪದ್ಧತಿ, ಕ್ರಮ ತಿಳಿಯದ ಕಾರಣದಿಂದಾಗಿ ತಾಯಿ ಮತ್ತು ಮಗುವಿನ ಆರೋಗ್ಯದಲ್ಲಿ ಏರುಪೇರುಗಳಾಗುವ ಸಾಧ್ಯತೆಗಳಿವೆ. ಕಾರಣ, ತಜ್ಞ ವೈದ್ಯರ ಸಲಹೆ ಪಡೆಯಬೇಕೆಂದು ಡಾ. ಶಶಿಧರ ರೇಶ್ಮೆ ತಿಳಿಸಿದರು.

# ಸಿ.ಎಂ ಸಿದ್ದರಾಮಯ್ಯ ರಾಜೀನಾಮೆ ನೀಡಲಿ

■ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ



ಮೂಡಾ ಹಗರಣದ ವಿಚಾರದಲ್ಲಿ ತಮ್ಮ ಪಾತ್ರವಿಲ್ಲ ಎನ್ನುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕಳಂಕದಿಂದ ದೂರವಾಗಲು ಅವರಷ್ಟಕ್ಕೆ ಅವರೇ ರಾಜೀನಾಮೆ ನೀಡಲಿ. ಅವರ ಸುದೀರ್ಘವಾದ ಪ್ರಾಮಾಣಿಕತೆಯ ರಾಜಕಾರಣ ಶಾಶ್ವತವಾಗಿ ಉಳಿದುಕೊಳ್ಳಬೇಕಾದರೆ ಅವರೇ ರಾಜೀನಾಮೆ ನೀಡುವದು ಸೂಕ್ತ ಎಂದು ಮಾಜಿ ಸಚಿವ ಬಿ.ಶ್ರೀರಾಮುಲು ಅಭಿಪ್ರಾಯಪಟ್ಟರು.

ಅವರು ಲಕ್ಮೇಶ್ವರಕ್ಕೆ ಆಗಮಿಸಿದ್ದ ಸಂದರ್ಭದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಅವರ ಮೇಲಿನ ಆರೋಪ ನಿವಾರಣೆಗೆ ರಾಜೀನಾಮೆ ನೀಡದಿದ್ದಲ್ಲಿ ಕಳಂಕ ಹೊತ್ತು ಉಳಿಯುತ್ತಾರೆ. ಕಾಂಗ್ರೆಸ್ ಪಕ್ಷದ ಹಗರಣಗಳ ವಿರುದ್ಧ ಬಿಜೆಪಿ ಪಕ್ಷದಿಂದ ಬೆಂಗಳೂರಿನಿಂದ ಮೈಸೂರಿನವರೆಗೆ 8 ದಿನಗಳ ಕಾಲ ಎಲ್ಲರೂ ಸೇರಿ ಪಾದಯಾತ್ರೆ ಕೈಗೊಳ್ಳುತ್ತೇವೆ. ಇದರಲ್ಲಿ ಮುಡಾ ಹಗರಣ, ವಾಲ್ಮೀಕಿ ಹಗರಣ ಎಲ್ಲವನ್ನು ಪ್ರಸ್ತಾಪಿಸುತ್ತೇವೆ.

ಪಾದಯಾತ್ರೆಯಲ್ಲಿ ಯಾವುದೇ ಬಿನ್ನಾಭಿಪ್ರಾಯವಿಲ್ಲ. ಮಾಜಿ ಮುಖ್ಯಮಂತ್ರಿ ಬಿಎಸ್‌ವೈ, ಕುಮಾರಸ್ವಾಮಿ, ಬಿ.ವೈ. ವಿಜಯೇಂದ್ರ, ಆರ್. ಅಶೋಕ, ಕೇಂದ್ರ ಮಂತ್ರಿಗಳು ಸೇರಿ ಜೆ.ಡಿ.ಎಸ್., ಬಿಜೆಪಿ ಕಾರ್ಯಕರ್ತರು, ಮುಖಂಡರು ಜಂಟಿಯಾಗಿ ಈ ಹೋರಾಟದಲ್ಲಿ ಭಾಗವಹಿಸುತ್ತಿದ್ದೇವೆ. ಸಣ್ಣ ಪುಟ್ಟ ಸಮಸ್ಯೆಗಳು ಬಗೆಹರಿದಿವೆ. ಈ ಸರಕಾರ ಬಂದಾಗಿನಿಂದ ನಯಾಪೈಸೆಯಷ್ಟು ಅಭಿವೃದ್ಧಿ ಕಾರ್ಯಗಳು ಆಗುತ್ತಿಲ್ಲ. ದರೋಡೆ, ಕೊಲೆಗಳು ರಾಜ್ಯದಲ್ಲಿ ನಡೆಯುತ್ತಿದ್ದು, ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಈ ಎಲ್ಲ ವಿಚಾರಗಳನ್ನು ಜನರ ಮುಂದಿಡುತ್ತೇವೆ.

ಬಸನಗೌಡ ಯತ್ನಾಳ, ರಮೇಶ ಜಾರಕಿಹೊಳಿ ಇವರು ಪಾದಯಾತ್ರೆಗೆ ಸಹಮತ ನೀಡುತ್ತಾರೆ. ಸಣ್ಣ ಪುಟ್ಟ ಭಿನ್ನಾಬಿಪ್ರಾಯ ಸರಿದೂಗಿಸಿಕೊಂಡು ಹೋಗುತ್ತೇವೆ ಎಂದು ಹೇಳಿದರು. ಈ ವೇಳೆ ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಪ್ರವೀಣ ಬಾಳಿಕಾಯಿ, ನಿಂಬಣ್ಣ ಮಡಿವಾಳರ, ಪರಶುರಾಮ ಇಮ್ಮಡಿ, ನವೀನ ಬೆಳ್ಳಟ್ಟಿ ಇದ್ದರು.

# ಪ್ರಣತಿಗೆ 'ಬಾಲ ಸಾಹಿತ್ಯ ಚಿಗುರು' ಪ್ರಶಸ್ತಿ ಪ್ರದಾನ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿಯ ಬಾಲ ಕವಿಯತ್ರಿ, ಜಿಲ್ಲಾ ಅಸಾಧಾರಣ ಪ್ರತಿಭಾ ಪುರಸ್ಕಾರ ವಿಜೇತೆ ಪ್ರಣತಿ ಆರ್.ಗಡಾದ ಅವರು ಬರೆದಿರುವ 'ನಾನು ಮಳೆಯಾದರೆ' ಎಂಬ ಮಕ್ಕಳ ಕೃತಿಗೆ ವಿಜಯಪುರ ಜಿಲ್ಲಾ ಸಿಂದಗಿಯ ವಿದ್ಯಾ ಚೇತನ ಪ್ರಕಾಶನವು ರಾಜ್ಯ ಮಟ್ಟದಲ್ಲಿ ನೀಡುವ ರಾಜ್ಯ ಮಟ್ಟದ ಬಾಲಸಾಹಿತ್ಯ 'ಚಿಗುರು ಪ್ರಶಸ್ತಿ' ಪ್ರದಾನ ಸಮಾರಂಭ ಇತ್ತೀಚೆಗೆ ಜರುಗಿತು.

ಸಿಂದಗಿಯ ಸಾರಂಗಮಠದಲ್ಲಿ ಡಾ. ಪ್ರಭುಸಾರಂಗದೇವ ಶಿವಾಚಾರ್ಯರ ಸಾನ್ನಿಧ್ಯದಲ್ಲಿ ಜರುಗಿದ ಸಮಾರಂಭದಲ್ಲಿ ಸಿಂದಗಿಯ ಶಾಸಕ ಅಶೋಕ ಮನಗೂಳಿಯವರು ಪ್ರಣತಿ ಗಡಾದರಿಗೆ ಶಾಲು ಹೊದೆಸಿ, ಪ್ರಶಸ್ತಿ ಪ್ರದಾನ ಮಾಡಿದರು.

ಸಮಾರಂಭದ ಸಾನಿಧ್ಯ ವಹಿಸಿದ್ದ ಡಾ. ಪ್ರಭು ಸಾರಂಗದೇವ ಶಿವಾಚಾರ್ಯಸ್ವಾಮೀಜಿ, ಪ್ರಶಸ್ತಿ ಸ್ವೀಕರಿಸಿದ ಪ್ರಣತಿ ಗಡಾದ ಮಾತನಾಡಿದರು. ಅಧ್ಯಕ್ಷತೆಯನ್ನು ನಿವೃತ್ತ ಪ್ರಾಧ್ಯಾಪಕ ಪ್ರೊ. ಶಾಂತು ಹಿರೇಮಠ ವಹಿಸಿದ್ದರು. ವೇದಿಕೆಯ ಮೇಲೆ ಪ್ರಶಸ್ತಿ ಪುರಸ್ಕೃತ ಮಕ್ಕಳ ಸಾಹಿತಿಗಳಾದ ಡಾ. ಲಲಿತಾ ಹೊಸಪ್ಯಾಟಿ, ಜಂಬುನಾಥ ಕಂಚ್ಯಾಣಿ, ಎಂ.ಎಂ. ಸಂಗಣ್ಣವರ, ವಿದ್ಯಾಚೇತನ ಪ್ರಕಾಶನದ ಸಂಚಾಲಕ ಹ.ಮ. ಪೂಜಾರ ಉಪಸ್ಥಿತರಿದ್ದರು.

ಸಮಾರಂಭದಲ್ಲಿ ಹಿರಿಯ ಸಾಹಿತಿಗಳಾದ ಡಾ. ಎಂ.ಎಂ. ಪಡಶೆಟ್ಟಿ, ಬಿ.ಎಂ. ಪಾಟೀಲ, ಸೋಮಶೇಖರ ವಾಲಿ, ಬಿ.ಆರ್. ನಾಡಗೌಡ, ಎಸ್.ಆರ್. ಗಣಾಚಾರಿ ಸೇರಿದಂತೆ ಅನೇಕ ಜನ ಮಕ್ಕಳ ಸಾಹಿತ್ಯಾಸಕ್ತರು ಪಾಲ್ಗೊಂಡಿದ್ದರು. ಮಕ್ಕಳ ಸಾಹಿತಿ ಎಸ್.ಎಸ್. ಸಾತಿಹಾಳ ಸ್ವಾಗತಿಸಿದರು. ರಾಜಶೇಖರ ಪೂಜಾರ ವಂದಿಸಿದರು.

ಪ್ರಶಸ್ತಿ ವಿಜೇತ ಕು. ಪ್ರಣತಿಯವರನ್ನು ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತು, ಜಿಲ್ಲಾ ಸಿರಿಗನ್ನಡ ವೇದಿಕೆ, ಜಿಲ್ಲಾ ವಚನ ಸಾಹಿತ್ಯ ಹಾಗೂ ಸಾಂಸ್ಕೃತಿಕ ಪರಿಷತ್ತು, ಜಿಲ್ಲಾ ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತು ಮುಂತಾದ ಸಂಘಟನೆಗಳು ಅಭಿನಂದಿಸಿವೆ.

# ಸಾಧಕರ ಜೀವನ ಚರಿತ್ರೆ ಅರಿಯಿರಿ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ವಿದ್ಯಾರ್ಥಿ ಜೀವನವು ಭವಿಷ್ಯದ ಅತ್ಯಂತ ಪ್ರಮುಖ ಘಟ್ಟವಾಗಿದ್ದು, ಗಂಭೀರವಾದ ಚಿಂತನೆಯೊಂದಿಗೆ ಕಲಿಕಾಭ್ಯಾಸ ಮಾಡಿ ಎಂದು ಮಾನವಧರ್ಮ ವಿಜಯೀ ಭವ ಟ್ರಸ್ಟ್ ಅಧ್ಯಕ್ಷೆ ಮಂಜುಳ ತಿಳಿಸಿದರು.



ಪಟ್ಟಣದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಡಾ. ಅಬ್ದುಲ್ ಕಲಾಂರವರ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಬಡ ಕುಟುಂಬದಲ್ಲಿ ಜನಿಸಿದ ಡಾ.ಕಲಾಂ, ಜಗತ್ತು ನಿಬ್ಬೆರಗಾಗುವಂತಹ ಸಾಧನೆ ಮಾಡಿದ ಅಮೂಲ್ಯ ರತ್ನವಾಗಿದ್ದಾರೆ. ಅಂತಹವರನ್ನು ಪಡೆದ ಈ ಭೂಮಿ ಪುಣ್ಯಭೂಮಿಯಾಗಿದೆ. ಮಹಾನ್ ಸಾಧಕರ ಜೀವನ ಚರಿತ್ರೆಯನ್ನು ನೀವೆಲ್ಲರೂ ಅರಿತು, ಅಳವಡಿಸಿಕೊಂಡಲ್ಲಿ ಉತ್ತಮ ಶಿಕ್ಷಣವಂತರಾಗಲು ಸಾಧ್ಯವೆಂದರು.

ಮುಖ್ಯ ಶಿಕ್ಷಕ ಮಂಜುನಾಥ ಮಾತನಾಡಿ ವಿದ್ಯಾರ್ಥಿಗಳು ತಮ್ಮ ಕುಟುಂಬದಲ್ಲಿ ಮೌಢ್ಯತೆ ಹೋಗಲಾಡಿಸಿ ಶಿಕ್ಷಣದಿಂದಾಗುವ ಅನುಕೂಲ ಹಾಗೂ ಶಿಕ್ಷಣದಿಂದ ಸಾಧನೆಗೈದ ಕಲಾಂರಂತಹ ಜೀವನದ ಸಾಧನೆಗಳ ಬಗ್ಗೆ ಅರಿವು ಮೂಡಿಸಿದರೆ ಪ್ರತೀ ಮನೆಯು ಅಂಧಕಾರದಿಂದ ಹೊರಬಂದು ಉತ್ತಮ ಜೀವನ ಕಟ್ಟಿಕೊಳಳಲು ಸಾಧ್ಯ ಎಂದರು.

ಗಣೇಶ್, ಅರುಣ್, ಆಜಾದ್ ಭಾಷಾ, ಶಶಿಕಿರಣ, ಪ್ರಜ್ವಲ್, ಶಾಂತರಾಜ್, ಅನಿಲ್ ಬಂಡ್ರಿ, ಶ್ರಾವಣ ಮುಂತಾದವರಿದ್ದರು.

# ಹೊಸ ರೈಲು ಮಾರ್ಗ ಕಾಮಗಾರಿ ಪ್ರಾರಂಭಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಮುಂಡರಗಿ-ಹಡಗಲಿ-ಹರಪನಹಳ್ಳಿ ಹೊಸ ರೈಲು ಮಾರ್ಗ ಕಾಮಗಾರಿಯನ್ನು ಪ್ರಾರಂಭಿಸುವಂತೆ ಸಚಿವ ವಿ.ಸೋಮಣ್ಣ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿವರ ಮೂಲಕ ಪ್ರಧಾನಿ ನರೇಂದ್ರ ಮೋದಿಯವರಿಗೆ ಮುಂಡರಗಿ ತಾಲೂಕಾ ರೈಲ್ವೆ ಹೋರಾಟ ಸಮಿತಿ ಅಧ್ಯಕ್ಷ ಬಸವರಾಜ ದೇಸಾಯಿಯವರು ನವದೆಹಲಿಯಲ್ಲಿ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿ ಮಾತನಾಡಿದ ಬಸವರಾಜ ದೇಸಾಯಿ, ಗದಗ-ಹರಪನಹಳ್ಳಿ ರೈಲ್ವೆ ಮಾರ್ಗ ಈ ಭಾಗದ ಜನರ ಬಹುದಿನಗಳ ಬೇಡಿಕೆಯಾಗಿದೆ. ಈ ರೈಲ್ವೆ ಮಾರ್ಗವನ್ನು ಬ್ರಿಟಿಷರ ಆಳ್ವಿಕೆಯಲ್ಲಿಯೇ ಸಮೀಕ್ಷೆ ಮಾಡಲಾಗಿತ್ತು. ಸ್ವಾತಂತ್ರ್ಯದ ನಂತರ ಈ ಯೋಜನೆ ನಿಷ್ಕ್ರಿಯವಾಗಿದೆ. ಈ ರೈಲು ಮಾರ್ಗ ಅನುಷ್ಠಾನಗೊಂಡರೆ ಉತ್ತರ ಭಾರತವನ್ನು ಬಾಗಲಕೋಟೆ ಮೂಲಕ ಸಂಪರ್ಕಿಸುತ್ತದೆ ಮತ್ತು ಬೆಂಗಳೂರಿನಿಂದ ದೆಹಲಿಗೆ ತಲುಪುವ ಹತ್ತಿರದ ಮಾರ್ಗವಾಗಿದೆ. ಈ ಮಾರ್ಗವು ಪ್ರಯಾಣಿಕರ ಸಮಯ ಮತ್ತು ಹಣವನ್ನು ಉಳಿಸುತ್ತದೆ. ಈ ಮಾರ್ಗವು ವಾಣಿಜ್ಯಕವಾಗಿಯೂ ಸದೃಢವಾಗಿದೆ ಎಂದರು.

ವಿಶ್ವ ಪರಂಪರೆಯ ತಾಣಗಳಾದ ಹಂಪಿ, ಬಾದಾಮಿ ಮತ್ತು ವಿಶ್ವವಿಖ್ಯಾತ ಗೋಲಗುಂಬಜ್‌ಗೆ ಭೇಟಿ ನೀಡಲ, ಪ್ರವಾಸೋದ್ಯಮದ ಅಭಿವೃದ್ಧಿಗೆ ಹೆಚ್ಚಿನ ಒತ್ತು ಸಿಗುತ್ತದೆ ಎಂದು ಮನವಿ ಪತ್ರದ ಮೂಲಕ ವಿನಂತಿಸಿದರು.

# ಉತ್ತಮ ಭವಿಷ್ಯ ರೂಪಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಕಾಲೇಜಿನ ಬಿಸಿಎ ವಿದ್ಯಾರ್ಥಿಗಳ ವಾರ್ಷಿಕೋತ್ಸವ ಹಾಗೂ ಪಾರಿತೋಷಕ ವಿತರಣೆ ಕಾರ್ಯಕ್ರಮ ಇತ್ತೀಚೆಗೆ ನಡೆಯಿತು. ಸಭೆಯ ಅಧ್ಯಕ್ಷತೆಯನ್ನು ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ ವಹಿಸಿದ್ದರು.



ಮುಖ್ಯ ಅತಿಥಿಗಳಾಗಿ ಆಗಮಿಸಿದ ಎಚ್‌ಸಿಇಸ್ ಕಾಲೇಜಿನ ಬಿಸಿಎ ವಿಭಾಗದ ಪ್ರಾಚಾರ್ಯರಾದ ಕವಿತಾ ವಿಭೂತಿ ಮಾತನಾಡಿ, ವಿದ್ಯಾರ್ಥಿಗಳು ಮುಂದಿನ ದಿನಗಳಲ್ಲಿ ಒಳ್ಳೆಯ ಕೆಲಸ ಕಾರ್ಯಗಳಲ್ಲಿ ತೊಡಗಿಕೊಂಡು ತಂದೆ-ತಾಯಿಯ ಪ್ರೀತಿಗೆ ಪಾತ್ರರಾಗಿ ಎಂದರು.

ಮಹಾವಿದ್ಯಾಲಯದ ಪ್ರಾಚಾರ್ಯ ಬಿ.ಎಸ್. ಹಿರೇಮಠ ಮಾತನಾಡಿ, ತಂತ್ರಜ್ಞಾನ ಯುಗದಲ್ಲಿ ವೈಜ್ಞಾನಿಕ ದೃಷ್ಟಿಯಿಂದ, ಛಲದಿಂದ ಗುರಿಯತ್ತ ಸಾಗುತ್ತಾ ಸ್ಪರ್ಧಾಲೋಕದಲ್ಲಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಿ ಎಂದು ಹಾರೈಸಿದರು.

ವಿವಿಧ ಸಾಂಘಿಕ ಹಾಗೂ ಕ್ರೀಡಾ ಚಟುವಟಿಕೆಗಳಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಪಾರಿತೋಷಕ ವಿತರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ, ಚೇತನ ಕುಡತರಕರ, ಸಂಯೋಜಕರಾದ ಪ್ರೊ. ಸವಿತಾ ಪೂಜಾರ, ಪ್ರೊ. ಅಲ್ವಿನಾ ಡಿ, ಪ್ರೊ. ಚೈತ್ರಾ ಡಿ, ಪ್ರೊ. ಶಾಹಿದಾ ಶಿರಹಟ್ಟಿ, ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಕೀರ್ತಿ ಹಾಗೂ ರಕ್ಷಿತಾ ಅಬ್ಬಿಗೇರಿ ಕಾರ್ಯಕ್ರಮ ನಿರೂಪಿಸಿದರು.

# ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನೆ, ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಆ.5ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಸ್ವತಂತ್ರ ಪದವಿಪೂರ್ವ ಮಹಾವಿದ್ಯಾಲಯದ 2024-25ನೇ ಸಾಲಿನ ಸಾಂಸ್ಕೃತಿಕ ಚಟುವಟಿಕೆಗಳು, ಕಾಲೇಜು ವಿದ್ಯಾರ್ಥಿ ಸಂಸತ್ತು ಉದ್ಘಾಟನೆ ಮತ್ತು ಪ್ರಥಮ ಪಿ.ಯು.ಸಿ. ವಿದ್ಯಾರ್ಥಿಗಳಿಗೆ ಸ್ವಾಗತ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಆಗಸ್ಟ್ 5ರಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸುಂಕದ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಹು.ಸ.ಶಿ.ಸಂ. ಹುಲಕೋಟಿಯ ಅಧ್ಯಕ್ಷ ಆರ್. ಎಂ. ಮೂಲಿಮನಿ ವಹಿಸುವರು. ಮುಖ್ಯ ಅತಿಥಿಗಳಾಗಿ ಗದಗ ಜಿಲ್ಲಾ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಕೆ.ಎಚ್. ಬೇಲೂರ, ಶಾಲಾ ಶಿಕ್ಷಣ ಇಲಾಖೆ(ಪ.ಪೂ.ಶಿ.ಇ.)ಯ ಉಪನಿರ್ದೇಶಕ ಜಿ.ಎನ್. ಕುರ್ತಕೋಟಿ, ಹು.ಸ.ಶಿ. ಸಂಸ್ಥೆಯ ಗೌರವ ಕಾರ್ಯದರ್ಶಿ ಎಂ.ಎಲ್. ಪೋತ್ನಿಸ್ ಆಗಮಿಸುವರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯ ಬಿ.ಬಿ. ಪಾಟೀಲ, ಆಡಳಿತಾಧಿಕಾರಿ ಆರ್.ಎಸ್. ಪಾಟೀಲ ಉಪಸ್ಥಿತರಿರುವರು. ಸಾಂಸ್ಕೃತಿಕ ವಿಭಾಗದ ಸಂಯೋಜಕ ಅಶೋಕ ಹಿಂಡಿಯವರು ಕಾರ್ಯಕ್ರಮಕ್ಕೆ ಸ್ವಾಗತ ಕೋರಿದ್ದಾರೆ.



ಶುಕ್ರವಾರ ನಡೆದ ಎ ಗ್ರೂಪ್ ಮಟ್ಟದ ಕ್ರೀಡಾಕೂಟದಲ್ಲಿ ನಗರದ ಸಿದ್ಧಲಿಂಗನಗರದ ಶ್ರೀ ವೆಂಕಟೇಶ್ವರ ಪ್ರೌಢಶಾಲೆಯ ವಿದ್ಯಾರ್ಥಿಗಳು ಖೋ ಖೋ ಆಟದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. ವಿಜೇತ ವಿದ್ಯಾರ್ಥಿಗಳಿಗೆ ಶಾಲಾ ಆಡಳಿತ ಮಂಡಳಿಯವರು ಮತ್ತು ಶಾಲಾ ಸಿಬ್ಬಂದಿ ವರ್ಗದವರು ಅಭಿನಂದಿಸಿ ಶುಭ ಹಾರೈಸಿದ್ದಾರೆ.

# ಪಂಚಮಸಾಲಿ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ



■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜ ಬಾಂಧವರೆಲ್ಲರೂ ಒಂದೆಡೆ ಸೇರಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಮೆಚ್ಚುಗೆ ವ್ಯಕ್ತಪಡಿಸಿದರು.ನಗರದ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಇತ್ತೀಚೆಗೆ ಪಂಚಮಸಾಲಿ ಸಮಾಜ ಸೇವಾ ಟ್ರಸ್ಟ್ ವತಿಯಿಂದ ನಡೆದ ಎಸ್.ಎಸ್.ಎಲ್.ಸಿ. ಹಾಗೂ ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ಪಂಚಮಸಾಲಿ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದದಲ್ಲಿ ಅವರು ಮಾತನಾಡಿದರು.

ಕೂಡಲಸಂಗಮದ ಶ್ರೀ ಬಸವಜಯ ಮೃತ್ಯುಂಜಯ ಮಹಾಸ್ವಾಮಿಗಳು ಹಾಗೂ ಶ್ರೀ ವಚನಾನಂದ ಸ್ವಾಮಿಗಳು ಈ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು, ಅಧ್ಯಕ್ಷತೆಯನ್ನು ಮೋಹನ ಮಾಳಶೆಟ್ಟಿ ವಹಿಸಿದ್ದರು.

ಇದೇ ಸಂದರ್ಭದಲ್ಲಿ ಗಣ್ಯ ಉದ್ದಿಮೆದಾರರಾದ ಅಶೋಕ ಸಂಕಣ್ಣವರ ಶ್ರೀ ಬಸವಜಯ ಮೃತ್ಯುಂಜಯ ಮಹಾಸ್ವಾಮಿಗಳು ಹಾಗೂ ಶ್ರೀ ವಚನಾನಂದ ಸ್ವಾಮಿಗಳನ್ನು ಪಂಚಮಸಾಲಿ ಸಮಾಜದ ಪರವಾಗಿ ಸನ್ಮಾನಿಸಿ ಗೌರವಿಸಿದರು. ಮುಖ್ಯ ಅತಿಥಿಗಳಾಗಿ ಶಾಸಕ ಸಿಸಿ. ಪಾಟೀಲ, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ, ಪಂಚಮಸಾಲಿ ಸಮಾಜ ಸೇವಾ ಟ್ರಸ್ಟಿಗಳಾದ ಶಾಂತಪ್ಪ ಮುಳವಾಡ, ಬಾಲಚಂದ್ರ ಭರಮಗೌಡ್ರ, ಅಶೋಕ ಸಂಕಣ್ಣವರ, ಪ್ರಕಾಶ ಮ್ಯಾಗೇರಿ, ಮಾಲತೇಶ ಪಾಟೀಲ, ಸಿದ್ದನಗೌಡ ಪಾಟೀಲ, ಮಹಾಂತೇಶಗೌಡ ಹಿರೇಮನಿಪಾಟೀಲ, ಶಂಕರ ಕರಿಬಿಷ್ಠಿ, ಸುರೇಶ ಚಿತ್ತರಗಿ, ವಿಶ್ವನಾಥ ಹಳ್ಳಿಕೇರಿ, ಶಿವರಾಜಗೌಡ ಹಿರೇಮನಿಪಾಟೀಲ, ಸಿದ್ದಲಿಂಗೇಶ ಕರಿಬಿಷ್ಠಿ, ಸಂತೋಷ ಅಕ್ಕಿ, ಸಂಗಮೇಶ ಕವಳಿಕಾಯಿ, ವಸಂತ ಪಡಗದ, ಶರಣಪ್ಪ ಬೋಳಣ್ಣವರ, ಸಂತೋಷ ಕಬಾಡಿ ಸೇರಿದಂತೆ ಪಂಚಮಸಾಲಿ ಸಮಾಜದ ಬಾಂಧವರು ಪಾಲ್ಗೊಂಡಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ಅಂಜುಮನ್ ಎ ಇಸ್ಲಾಂ ಸಂಸ್ಥೆಯ ಕಾರ್ಯದರ್ಶಿ ಇಮ್ತಿಯಾಜ್ ಮಾನ್ವಿ

# ಅಂಜುಮನ್ ಸಂಸ್ಥೆಯಿಂದ ಸಮುದಾಯದ ಅಭಿವೃದ್ಧಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅಂಜುಮನ್ ಎ ಇಸ್ಲಾಂ ಸಂಸ್ಥೆಯು ಸಮಾಜದ ಜನರ ಅಭಿವೃದ್ಧಿಗಾಗಿ 2005ರಲ್ಲಿ ಕರ್ನಾಟಕ ವಕ್ಫ್ ಬೋರ್ಡ್‌ನಲ್ಲಿ ನೋದಾಯಿಸಲ್ಪಟ್ಟಿತು. ಸಮಾಜದ ಯಾವುದೇ ಆಗು-ಹೋಗುಗಳ ಕುರಿತು ಹಾಗೂ ಯಾವುದೇ ಸಂದರ್ಭದಲ್ಲಿ ಸಮುದಾಯದ ಪರವಾದ ನಿರ್ಣಯ ಕೈಗೊಳ್ಳುವ ಅಧಿಕಾರ ಕೇವಲ ಅಂಜುಮನ್ ಸಂಸ್ಥೆಗೆ ಮಾತ್ರ ಇದೆ ಎಂದು ಕಾರ್ಯದರ್ಶಿ ಇಮ್ತಿಯಾಜ್ ಮಾನ್ವಿ ತಿಳಿಸಿದರು.




ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸಂಸ್ಥೆಯ ಉದ್ದೇಶ ರಾಜಕೀಯ ಮಾಡುವುದಲ್ಲ, ಅಥವಾ ಸಂಸ್ಥೆಯಿಂದ ವೈಯಕ್ತಿಕ ಬೆಳವಣಿಗೆ ಮಾಡಿಕೊಳ್ಳುವುದಲ್ಲ. ಸಂಸ್ಥೆಯು ಸಮುದಾಯದ ಜನರ ಹಿತಕಾಪಾಡುವುದು ಮತ್ತು ಸಮಾಜದ ಜನರ ಮೇಲೆ ಅನ್ಯಾಯಗಳು ನಡೆದಾಗ ಇದನ್ನು ವಿರೋಧಿಸುವುದು ಜೊತೆಗೆ ಅನ್ಯಾಯಕ್ಕೆ ಒಳಗಾದ ಜನರಿಗೆ ನ್ಯಾಯ ಕೊಡಿಸುವಲ್ಲಿ ಹೋರಾಟ ನಡೆಸುವುದು ಸೇರಿದಂತೆ ಸಮಾಜದ ಜನಪರವಾದ ಕೆಲಸ ಕಾರ್ಯಗಳನ್ನು ಮಾಡುವ ಮೂಲಕ ಸಮುದಾಯದ ಜನರ ವಿಶ್ವಾಸ ಗಳಿಸಬೇಕಾದ ಜವಾಬ್ದಾರಿಯಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ವೇಳೆ ಅಂಜುಮನ್ ಸಂಸ್ಥೆಯ ಅಧ್ಯಕ್ಷ ಮಹಮ್ಮದ ಯೂಸೂಫ್ ನಮಾಜಿ, ಖಜಾಂಚಿ ಬಾಷಾಸಾಬ ಮಲ್ಲಸಮುದ್ರ, ಇಲಿಯಾಸ್ ಖೈರಾತಿ, ಅಬ್ದುಲ ಕರೀಂ, ಅಬ್ದುಲ ಲತೀಫ್ ಶೇಖ, ಉಮರ ಫಾರೂಖ ಹುಬ್ಬಳ್ಳಿ, ಅನ್ವರ ಶಿರಹಟ್ಟಿ, ಮಹಮ್ಮದ ಶಾಲಗಾರ, ಸಮೀರ ಜಮಾದಾರ, ಮಹಮ್ಮದ ಜುನೇದ, ಆಶೀಫ್‌ಅಲಿ ಮುಲ್ಲಾ, ರಫೀಕ ಜಮಾಲಖಾನ್, ಜುನೇದ ಉಮಚಗಿ, ಅಶ್ರಫ್‌ಅಲಿ ಹೊಸಳ್ಳಿ ಮುಂತಾದವರಿದ್ದರು.

ಹಂತ ಹಂತವಾಗಿ ಶಾಸಕರ ಅನುದಾನದಲ್ಲಿ 40 ಲಕ್ಷ ಅನುದಾನ ಮಂಜೂರಾಗಿದ್ದು, ಇದರ ಕೆಲಸ ಪ್ರಾರಂಭಿಸುವ ಹಂತದಲ್ಲಿ ಇದ್ದೇವೆ. ಇದರ ಜೊತೆಗೆ 7.50 ಲಕ್ಷ ರೂ ಶಾಸಕರ ಅನುದಾದಲ್ಲಿ ನಿರ್ಮಿತಿ ಕೇಂದ್ರದ ಮೂಲಕ ಮಲ್ಲಸಮುದ್ರ ರಸ್ತೆಯಲ್ಲಿರುವ ಸಂಸ್ಥೆಯ ಜಾಗೆಯ ಸುತ್ತಲೂ ಗೋಡೆ ನಿರ್ಮಿಸಲಾಗಿದೆ. ಇದರ ಜೊತೆಗೆ ಕಳೆದ 2016ರಿಂದ ಮುಸ್ಲಿಂ ಸಮಾಜದ ಜನರ ಅನೇಕ ರಚನಾತ್ಮಕ ಕೆಲಸ ಕಾರ್ಯಗಳನ್ನು ನಡೆಸುತ್ತ ಬಂದಿದ್ದೇವೆ. ಈ ಅವಧಿಯಲ್ಲಿ ಸಂಸ್ಥೆಯಿಂದ ಅನೇಕ ಸಾಮಾಜಿಕ, ರಚನಾತ್ಮಕ ಕೆಲಸ ಕಾರ್ಯಗಳನ್ನ ಮಾಡಲಾಗಿದೆ ಎಂದು ಇಮ್ತಿಯಾಜ್ ಮಾನ್ವಿ ವಿವರಿಸಿದರು.

## ಕೋಟ್ಪಾ ಕಾಯ್ದೆ ಉಲ್ಲಂಘಿಸಿದವರ ವಿರುದ್ಧ ಕ್ರಮ




■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಥೋಡ್ ಮಾರ್ಗದರ್ಶನದಲ್ಲಿ ಶಿರಹಟ್ಟಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ, ಶಿರಹಟ್ಟಿ ತಾಲೂಕಾ ಆರೋಗ್ಯಾಧಿಕಾರಿ ಡಾ. ಸುಭಾಶಚಂದ್ರ ದಾಯಗೊಂಡ, ಉಪ ತಹಸೀಲ್ದಾರ ಎಸ್.ಎಚ್. ಭಜಂತ್ರಿ ನೇತೃತ್ವದಲ್ಲಿ ಜಿಲ್ಲಾ ತಂಬಾಕು ನಿಷೇಧ ಕೋಶ ಗದಗ, ಶಿರಹಟ್ಟಿ ತಾಲೂಕಾ ತನಿಖಾ ದಳದ ಸಹಕಾರದೊಂದಿಗೆ ಪಟ್ಟಣದ ಬಸವೇಶ್ವರ ಸರ್ಕಲ್, ಬೆಳ್ಳಟ್ಟಿ ರಸ್ತೆಗಳಲ್ಲಿ ಕೋಟ್ಪಾ ಕಾಯ್ದೆ ಉಲ್ಲಂಘನೆಯ ವಿರುದ್ಧ ವಿಶೇಷ ಕಾರ್ಯಾಚರಣೆ ನಡೆಸಿ ತಂಬಾಕು ನಿಯಂತ್ರಣ ಕಾಯ್ದೆ ಕೋಟ್ಪಾ–2003ರ ಕುರಿತು ಜಾಗೃತಿ ಮೂಡಿಸಿ ಉಲ್ಲಂಘನೆ ಮಾಡಿದವರ ವಿರುದ್ಧ ಎಚ್ಚರಿಕೆ ನೀಡಿದರು. ಒಟ್ಟು 34 ಪ್ರಕರಣ ದಾಖಲಿಸಿ ರೂ. 6100 ದಂಡ ಸಂಗ್ರಹಿಸಲಾಯಿತು.

ಕೋಟ್ಪಾ ಕಾಯ್ದೆ ಪ್ರಕಾರ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧದ ಕುರಿತು ನಾಮಫಲಕ ಬಿತ್ತರಿಸುವದು ಆ ಸ್ಥಳದ ಮಾಲೀಕರ ಜಾವಾಬ್ದಾರಿಯಾಗಿರುತ್ತದೆ. ಕೆಲವು ಅಂಗಡಿಗಳ ಹಿಂದೆ ಧೂಮಪಾನದ ಅನಧಿಕೃತ ಅಡ್ಡೆಗಳನ್ನು ಮಾಡಿಕೊಂಡಿದ್ದು, ಅಂಥವರ ವಿರುದ್ಧ ಕ್ರಮ ವಹಿಸಲಾಯಿತು. ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುವುದರಿಂದ ಸಾರ್ವಜನಿಕರಷ್ಟೇ ಅಲ್ಲದೆ, ಆ ಸ್ಥಳದ ಮಾಲಿಕ, ಕೆಲಸಗಾರರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿರುವದು ಕಂಡುಬಂದಿದೆ.

ತಂಬಾಕು ಉತ್ಪನ್ನಗಳ ಕಾಣುವಂತೆ ಪ್ರದರ್ಶಿಸುವುದು, ಶಾಲಾ–ಕಾಲೇಜು ಸುತ್ತ 100 ಗಜದವರೆಗೆ ತಂಬಾಕು ಉತ್ಪನ್ನ ಮಾರಾಟ ಮಾಡುವುದು ಅಪರಾಧವಾಗಿದೆ. ಮುಂದಿನ ದಿನಗಳಲ್ಲಿ ಅಂತಹ ಪ್ರಕರಣ ಕಂಡುಬಂದಲ್ಲಿ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಶಿರಹಟ್ಟಿ ಪ.ಪಂ ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ ತಿಳಿಸಿದರು.

ಈ ದಾಳಿಗಳಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಗೋಪಾಲ ಸುರಪುರ, ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿ ಜಗದೀಶ ಕೊಡಿಹಳ್ಳಿ, ಪೊಲೀಸ್ ಇಲಾಖೆಯ ಲಮಾಣಿ, ಐ.ಹೆಚ್. ಮುಲ್ಲಾ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಾಮಾಜಿಕ ಕಾರ್ಯಕರ್ತೆ ಬಸಮ್ಮ ಚಿತ್ತರಗಿ, ಸಾಮಾಜಿಕ ಕಾರ್ಯಕರ್ತ ಗಿರೀಶ್ ಮಳಿಗವಾಡ, ಸುಭಾಶ್ ಹಾಜರಿದ್ದರು.

## ವಾಲಿಬಾಲ್‌ನಲ್ಲಿ ತಾಲೂಕು ಮಟ್ಟಕ್ಕೆ ಆಯ್ಕೆ




■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಇತ್ತೀಚೆಗೆ ಮುಳಗುಂದದ ಎಸ್.ಜೆ.ಜೆ.ಎಮ್. ಪ್ರೌಢಶಾಲಾ ಮೈದಾನದಲ್ಲಿ ನಡೆದ ಪ್ರಾಥಮಿಕ ಶಾಲಾ ಕ್ರೀಡಾಕೂಟದಲ್ಲಿ ವಾಲಿಬಾಲ್ ಪಂದ್ಯಾವಳಿಯಲ್ಲಿ ಸರಕಾರಿ ಮಾದರಿ ಪ್ರಾಥಮಿಕ ಕನ್ನಡ ಹೆಣ್ಣುಮಕ್ಕಳ ಶಾಲೆಯ ಬಾಲಕಿಯರು ತಾಲೂಕಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಮುಖ್ಯ ಶಿಕ್ಷಕ ಡಾ. ಎಸ್.ವಿ. ತಮ್ಮನಗೌಡ್ರ, ಶಿಕ್ಷಕರಾದ ಪಂಚಾಕ್ಷರಯ್ಯ ಮರಿದೇವರಮಠ, ಶ್ಯಾಮ್ ಸರ್ವದೆ, ಸಿ.ಆರ್.ಪಿ. ಮಹಾಂತೇಶ ನಿಂಬನಾಯ್ಕರ್, ಶೋಭಾ ಪಾಟೀಲ, ಕೆ.ಎಸ್. ಗಾಣಿಗೇರ, ಆರ್.ಎಂ. ರೋಣದ ಇವರ ಮಾರ್ಗದರ್ಶನದಲ್ಲಿ ಥ್ರೋಬಾಲ್‌ನಲ್ಲಿ ದ್ವಿತೀಯ, ಖೋ ಖೋ ಪಂದ್ಯಾವಳಿಯಲ್ಲಿ ದ್ವಿತೀಯ, ವೈಯಕ್ತಿಕ ಆಟದಲ್ಲಿ ದಿವ್ಯಶ್ರೀ ಮ್ಯಾಗೇರಿ ಎತ್ತರ ಜಿಗಿತದಲ್ಲಿ ಪ್ರಥಮ ಸ್ಥಾನ ಪಡೆಯುವುದರೊಂದಿಗೆ ಶಾಲೆಯ ಕೀರ್ತಿ ಹೆಚ್ಚಿಸಿದ್ದಾರೆ.

ಎಸ್.ಡಿ.ಎಮ್.ಸಿ. ಅಧ್ಯಕ್ಷ ಮಹಾಂತೇಶ ಎಸ್.ಕಣವಿ ಸೇರಿದಂತೆ ಸದಸ್ಯರು, ಗ್ರಾಮಸ್ಥರು ವಿದ್ಯಾರ್ಥಿಗಳಿಗೆ ಅಭಿನಂದಿಸಿದರು. ಈ ಸಂದರ್ಭದಲ್ಲಿ ಶ್ಯಾಮ ಸರ್ವದೆ, ಶೋಭಾ ಪಾಟೀಲ, ಕೆ.ಎಸ್. ಗಾಣಿಗೇರ, ಆರ್.ಎಂ. ರೋಣದ ಉಪಸ್ಥಿತರಿದ್ದರು.

## ಚುನಾವಣೆಯ ತರುವಾಯ ಕಾಮಗಾರಿ ನಡೆಯಲಿ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಅಂಜುಮನ್ ಕಮಿಟಿ ವತಿಯಿಂದ ಸುದ್ದಿಗೋಷ್ಠಿ ನಡೆಸಿ 2005ರಿಂದ 2024ರವರೆಗೂ ತಾವು ಅಂಜುಮನ್ ಸಂಸ್ಥೆಗಾಗಿ ಕೈಕೊಂಡ ಕಾರ್ಯಕ್ರಮಗಳ ಬಗ್ಗೆ ವಿವರಿಸಿ, 40 ಲಕ್ಷ ರೂ.ಗಳ ಕಾಮಗಾರಿ ನಡೆಸುವ ಉದ್ದೇಶವನ್ನು ವ್ಯಕ್ತಪಡಿಸಿರುವುದು ಸ್ವಾಗತಾರ್ಹ. ಆದರೆ ಈಗಾಗಲೇ ಗದಗ ನಗರದಲ್ಲಿ ಹಲವಾರು ಯುವಕರು ಸಂಘಟನೆಯವರು ಅಂಜುಮನ್ ಸಂಸ್ಥೆಗೆ ಚುನಾವಣೆ ನಡೆಸುವಂತೆ ಕೋರಿ ವಕ್ಫ್ ಮಂಡಳಿಗೆ ಅರ್ಜಿ ಸಲ್ಲಿಸಿದ್ದು, ಸದರಿಯವರು ಶೀಘ್ರದಲ್ಲಿಯೇ ಚುನಾವಣೆ ಘೋಷಿಸುವುದಾಗಿ ತಿಳಿಸಿರುವುದರಿಂದ ಈ ಸಮಯದಲ್ಲಿ ಕಾಮಗಾರಿಗೆ ಚಾಲನೆ ನೀಡುವುದು ಸೂಕ್ತವಲ್ಲ ಎಂದು ಜೆಡಿಎಸ್ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಜಿಅಲಿ ಎಚ್.ಕೊಪ್ಪಳ ಅಭಿಪ್ರಾಯಪಟ್ಟಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಈ ಸಂದರ್ಭದಲ್ಲಿ ಕಾಮಗಾರಿಗಳಿಗೆ ಚಾಲನೆ ನೀಡಿದರೆ ಸಾರ್ವಜನಿಕವಾಗಿ ಚರ್ಚೆಗೆ ಗ್ರಾಸವಾಗುತ್ತದೆ. ಆದ್ದರಿಂದ, ಚುನಾವಣೆಯ ನಂತರ ಚುನಾಯಿತ ಪ್ರತಿನಿಧಿಗಳು ಕಾಮಗಾರಿಗೆ ಚಾಲನೆ ಕೊಟ್ಟರೆ ಉತ್ತಮ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

### ಕೃಷಿ ಗೋಷ್ಠಿ ಕಾರ್ಯಕ್ರಮದಲ್ಲಿ ಕೃಷಿ ವಿವಿ ಉಪಕುಲಪತಿ ಡಾ. ಪಿ.ಎಲ್. ಪಾಟೀಲ ಅಭಿಮತ

# ಮಣ್ಣಿನ ಋಣ ತೀರಿಸಲು ಸಾಧ್ಯವಿಲ್ಲ

■ವಿಜಯಸಾಕ್ಷಿ ಸುದ್ದಿ, ನರೇಗಲ್

ಮನುಷ್ಯನಿಗೆ ಮಣ್ಣು ಅತ್ಯಂತ ಮಹತ್ವದ ವಸ್ತು. ಅವನ ಹುಟ್ಟಿನಿಂದ ಕೊನೆಗಾಲದವರೆಗೂ ಅವನು ಮಣ್ಣಿನಿಂದ ಪಾಠ ಕಲಿಯುತ್ತ ಹೋಗುತ್ತಾನೆ. ಆದ್ದರಿಂದ ಮನುಷ್ಯನಿಗೆ ಮಣ್ಣಿನ ಋಣವನ್ನು ತೀರಿಸಿಲು ಎಂದಿಗೂ ಸಾಧ್ಯವಿಲ್ಲ. ಆದರೆ ತನ್ನ ಜೀವಿತಾವಧಿಯುದ್ದಕ್ಕೂ ಆತ ಮಣ್ಣಿನ ಸಂರಕ್ಷಣೆಗೆ ಮುಂದಾಗಬೇಕೆಂದು ಕೃಷಿ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಪಿ.ಎಲ್. ಪಾಟೀಲ ಹೇಳಿದರು.

ಪಟ್ಟಣದ ಹಿರೇಮಠದ ಸಭಾಭವನದಲ್ಲಿ ಮಾತೋಶ್ರೀ ದಿ. ಬಸಮ್ಮನವರು ಸಂಗನಗೌಡ ಪಾಟೀಲ ಅವರ 20ನೇ ಪುಣ್ಯಸ್ಮರಣೋತ್ಸವದ ನಿಮಿತ್ತ ಹಮ್ಮಿಕೊಂಡಿದ್ದ ಕೃಷಿ ಗೋಷ್ಠಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಣ್ಣು ಒಮ್ಮೆ ನಾಶವಾದರೆ ಮರಳಿ ಪಡೆಯಲಾಗದ ಅಮೂಲ್ಯ ಸಂಪತ್ತು. ಸಸ್ಯ ಸೇರಿದಂತೆ ಸಕಲ ಜೀವಿಗಳಿಗೆ ಮಣ್ಣು ಮಾತೃ ಸ್ವರೂಪಿ. ಮಣ್ಣು ತನ್ನ ಫಲವತ್ತತೆಯನ್ನು ಕಳೆದುಕೊಳ್ಳಲು ಮುಖ್ಯ ಕಾರಣ ರಾಸಾಯನಿಕಗಳ ಬಳಕೆ. ಭೂಮಿಯಲ್ಲಿ ಸಾವಯವ ಪದಾರ್ಥಗಳು ಹೇರಳವಾಗಿದ್ದರೆ ಮಾತ್ರ ಮಣ್ಣಿನ ಫಲವತ್ತತೆ ಉಳಿಯುತ್ತದೆ. ಒಣ ಬೇಸಾಯದ ಪ್ರದೇಶದಲ್ಲಿ ಮಳೆ ಕಡಿಮೆ ಮತ್ತು ಅನಿಶ್ಚಿತ. ಮಳೆ ನೀರನ್ನು ಬಿದ್ದ ಸ್ಥಳದಲ್ಲಿಯೇ ಸಂರಕ್ಷಣೆ ಮಾಡಿ ಭೂಮಿ ಸವಕಳಿ ಆಗದಂತೆ ನೋಡಿಕೊಳ್ಳಬೇಕು. ಸಗಣಿ ಗೊಬ್ಬರ, ಎರೆಹುಳು ಗೊಬ್ಬರ, ತ್ಯಾಜ್ಯವಸ್ತು, ಕಾಂಪೋಸ್ಟ್, ಜೈವಿಕ ಗೊಬ್ಬರ, ಸಾವಯವ ಗೊಬ್ಬರಗಳನ್ನು ಹೆಚ್ಚಾಗಿ ಬಳಸಿದಲ್ಲಿ ಮಣ್ಣಿನ ಸಾರವನ್ನು ಉಳಿಸಿಕೊಳ್ಳಲು ಸಾಧ್ಯ ಎಂದರು.



ಕೃಷಿ ಪಂಡಿತ ಗುರುನಾಥ ಓದುಗೌಡ್ರ ಮಾತನಾಡಿ, ನಮ್ಮ ರೈತ ಬಾಂಧವರಲ್ಲಿ ಒಂದು ತಪ್ಪು ಕಲ್ಪನೆ ಬೇರೂರಿಬಿಟ್ಟಿದೆ. ಏನೆಂದರೆ ಗೊಬ್ಬರವನ್ನು ಸಸ್ಯಕ್ಕೆ ಕೊಡುತ್ತಿದ್ದೇವೆ ಎನ್ನುವುದು. ತಿಳಿಯಬೇಕಾದ ವಿಷಯ ಏನೆಂದರೆ ನಾವು ನೀಡಿದ ಯಾವುದೇ ಗೊಬ್ಬರವನ್ನು ಸಸ್ಯ ನೇರವಾಗಿ ಹೀರಿಕೊಳ್ಳುವುದಿಲ್ಲ. ಬದಲಾಗಿ ಮೊದಲು ಅದನ್ನು ಮಣ್ಣು ಹೀರಿಕೊಂಡು ನಂತರ ಮಣ್ಣಿನ ಮುಖಾಂತರ ಅದರ ಸತ್ವವನ್ನು ಸಸ್ಯಗಳು ಹೀರುತ್ತವೆ. ಮಣ್ಣಿನ ಪರೀಕ್ಷೆ ಮಾಡಿಸಿ ಅದರಲ್ಲಿಯ ಅನಾರೋಗ್ಯ, ಆರೋಗ್ಯ ಏನಿದೆ ಎಂಬುದನ್ನು ತಿಳಿದುಕೊಳ್ಳಬೇಕು. ಅಂದಾಗ ಕೃಷಿಯಿಂದ ಉತ್ಪಾದನೆ ಹಾಗೂ ಲಾಭ ಪಡೆದುಕೊಳ್ಳಲು ಸಾಧ್ಯವಾಗುತ್ತದೆ ಎಂದರು.

ಕೆ.ಸಿ.ಸಿ ಬ್ಯಾಂಕ್‌ನ ಮಾಜಿ ಅಧ್ಯಕ್ಷ ಐ.ಎಸ್. ಪಾಟೀಲ ಮಾತನಾಡಿದರು. ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಆಶೀರ್ವಚನ ನೀಡಿದರು. ಶಾಸಕ ಜಿ.ಎಸ್. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಮಿಥುನ ಪಾಟೀಲ, ಅಕ್ಷಯ ಪಾಟೀಲ, ವಿ.ಆರ್. ಗುಡಿಸಾಗರ, ಆನಂದ, ಶಿವನಗೌಡ ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಪರಶುರಾಮ ಅಳಗವಾಡಿ, ಮುತ್ತಪ್ಪ ನೂಲ್ಕಿ, ದಾವುದಲಿ ಕುದರಿ, ರಾಚಯ್ಯ ಮಾಲಗಿತ್ತಿಮಠ, ಬಸೀರಾಬಾನು ನದಾಫ್, ನಾಗಭೂಷಣ ಬೆಳವಡಿ, ಎನ್.ವೈ. ಜೋಗಿ, ಎಂ.ಎನ್. ಹುಲಕೋಟಿ, ಎ.ಎ. ನವಲಗುಂದ, ಬಾಳಪ್ಪ ಸೋಮಗೊಂಡ, ಎ.ಆರ್. ಮಲ್ಲನಗೌಡ್ರ, ಕಳಕನಗೌಡ ಪೊಲೀಸ್‌ಪಾಟೀಲ, ನಿಂಗಪ್ಪ ಲಕ್ಕನಗೌಡ್ರ, ಶೇಖಪ್ಪ ಜುಟ್ಲ, ಶೇಖಪ್ಪ ಕೆಂಗಾರ, ಮೈಲಾರಪ್ಪ ಚಳ್ಳಮರದ, ಸೋಮಶೇಖರ ಲಕ್ಕನಗೌಡ್ರ, ವೀರಪ್ಪ ಜೀರ್ಲ, ಅಲ್ಲಾಭಕ್ಷಿ ನದಾಫ್, ನಿಂಗಪ್ಪ ಹೊನ್ನಾಪೂರ, ಮುತ್ತಣ್ಣ ಹಡಪದ, ನಜೀರ್ ಹದ್ಲಿ, ಸಂತೋಷ ಹನಮಸಾಗರ, ಮಂಜುನಾಥ ಧರ್ಮಾಯತ, ಪ್ರಕಾಶ ಪಾದಗಟ್ಟಿ ಮುಂತಾದವರಿದ್ದರು.

ನರೇಗಲ್ ಮತ್ತು ಸುತ್ತಲಿನ ಭಾಗಗಳು ಪಟ್ಟಣ ಪಂಚಾಯತಿ ವ್ಯಾಪ್ತಿಗೆ ಬರುವುದರಿಂದ ಇಲ್ಲಿ ಎರೆಹುಳುಗಳನ್ನು ಸಾಕಲು, ಎರೆ ಹುಳ ಗೊಬ್ಬರ ಪಟ್ಟಿ ತಯಾರಿಕೆಗೆ ಸಹಾಯ ಧನ ಸಿಗುವುದಿಲ್ಲ. ಇದರಿಂದ ಈ ಭಾಗದ ರೈತರಿಗೆ ತೊಂದರೆಯಾಗಿದೆ. ಆದ್ದರಿಂದ ಈ ತೊಂದರೆಯನ್ನು ನಿವಾರಿಸಿ, ಇಲ್ಲಿಯೂ ಸಹ ಎರೆಹುಳು ಪಟ್ಟಿ ಮಾಡಲು, ಗೊಬ್ಬರ ತಯಾರಿಸಲು ಶಾಸಕರು ಅನುಕೂಲ ಮಾಡಿಕೊಡಬೇಕು ಎಂದು ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ ಶಾಸಕರಲ್ಲಿ ವಿನಂತಿಸಿದರು.

ರೋಣ ಮತ್ತು ಗಜೇಂದ್ರಗಡ ತಾಲೂಕುಗಳು ಮುಖ್ಯವಾಗಿ ಕೃಷಿ ಪ್ರಧಾನ ತಾಲೂಕುಗಳಾಗಿವೆ. ಹುಲಕೋಟಿಯಲ್ಲಿರುವಂತೆ ಇಲ್ಲಿಯೂ ಸಹ ಒಂದು ಕೃಷಿ ವಿಜ್ಞಾನ ಕೇಂದ್ರ ಅವಶ್ಯವಾಗಿ ಬೇಕಾಗಿದೆ. ಆದ್ದರಿಂದ ನರೇಗಲ್ಲ ಅಥವಾ ರೋಣದಲ್ಲಿ ಒಂದು ಕೃಷಿ ವಿಜ್ಞಾನ ಕೇಂದ್ರವನ್ನು ಸ್ಥಾಪಿಸಲು ಶಾಸಕರು ಮತ್ತಿತರ ಜನ ಪ್ರತಿನಿಧಿಗಳು ಪ್ರಯತ್ನಿಸಬೇಕು.

– ಡಾ. ಕೆ.ಬಿ. ಧನ್ನೂರ.

### ಗುರುವಂದನಾ, ಉಪನ್ಯಾಸ ಕಾರ್ಯಕ್ರಮದಲ್ಲಿ ಪಂ.ರಾಜಗುರು ಗುರುಸ್ವಾಮಿ ಕಲಕೇರಿ


# ಜೀವನದಲ್ಲಿ ಶಿಸ್ತು, ಕ್ರಮಬದ್ಧತೆ ಮುಖ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಸಂಸ್ಕೃತಿ ಸಂಸ್ಕಾರ ಮೇರುಪಂಕ್ತಿಯಲ್ಲಿದೆ. ಇಂತಹ ಆದರ್ಶ ಮತ್ತು ಮೌಲ್ಯಯುತ ಸಂಸ್ಕಾರ–ಸಂಸ್ಕೃತಿಗಳು ಗುರುವಿನ ಕೃಪೆ, ಮಾರ್ಗದರ್ಶನದಿಂದ ಬಂದಿವೆ ಎಂದು ಕನಕ–ಪುರಂದ ಪ್ರಶಸ್ತಿ ಪುರಸ್ಕೃತ ಹಿರಿಯ ಸಂಗೀತ ಕಲಾವಿದ ಪಂ.ರಾಜಗುರು ಗುರುಸ್ವಾಮಿ ಕಲಕೇರಿ ಹೇಳಿದರು.

ಅವರು ಇತ್ತೀಚೆಗೆ ಗದುಗಿನ ರೋಟರಿ ಐಕೇರ್ ಸೆಂಟರ್‌ನಲ್ಲಿ ರೋಟರಿ ಕ್ಲಬ್ ಗದಗ–ಬೆಟಗೇರಿ, ಇನ್ನರ್‌ವ್ಹೀಲ್ ಕ್ಲಬ್ ಹಾಗೂ ಸಂಸ್ಕಾರ ಭಾರತಿ ಗದಗ ಜಿಲ್ಲೆ ಇವುಗಳ ಸಂಯುಕ್ತ ಆಶ್ರಯದಲ್ಲಿ ಗುರುಪೂರ್ಣಿಮೆ ನಿಮಿತ್ತ ಏರ್ಪಡಿಸಿದ್ದ ಗುರುವಂದನಾ ಕಾರ್ಯಕ್ರಮದಲ್ಲಿ ಗುರುವಂದನೆ ಸ್ವೀಕರಿಸಿ ಮಾತನಾಡಿದರು.

ಪ್ರತಿಯೊಬ್ಬರ ಜೀವನದಲ್ಲಿ ಶಿಸ್ತು ಮತ್ತು ಕ್ರಮಬದ್ಧತೆ ಮುಖ್ಯ. ಬದುಕು ಶೃತಿಗೊಳಿಸಿದ ವೀಣೆಯಂತಾಗಬೇಕು, ಸುಮಧುರ ಸಂಗೀತದಂತಿರಬೇಕು. ಪ್ರತಿಯೊಬ್ಬರ ಜೀವನದಲ್ಲೂ ಏನನ್ನಾದರೂ ಸಾಧಿಸಬೇಕೆಂಬ ಛಲವನ್ನು ಹೊಂದಿರಬೇಕು.



ಮುಂದೆ ಗುರಿ, ಹಿಂದೆ ಗುರು ಇದ್ದರೆ ಮಾತ್ರ ಸಾಧನೆ ಸಾಕಾರಗೊಳ್ಳುವದು ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ರೋಟರಿ ಕ್ಲಬ್ ಅಧ್ಯಕ್ಷ ಡಾ. ಆರ್.ಬಿ.ಉಪ್ಪಿನ ಸಂದರ್ಭೋಚಿತವಾಗಿ ಮಾತನಾಡಿದರು. ವೇದಿಕೆಯ ಮೇಲೆ ಸಂಸ್ಕಾರ ಭಾರತಿ ಪ್ರಾಂತ ಕಾರ್ಯದರ್ಶಿ ಮಾರುತಿ ಹುಟಗಿ, ಪ್ರೊ. ದತ್ತಪ್ರಸನ್ ಪಾಟೀಲ, ರೋಟರಿ ಕ್ಲಬ್ ಕಾರ್ಯದರ್ಶಿ ಸಂತೋಷ ಅಕ್ಕಿ, ಇನ್ನರ್‌ವ್ಹೀಲ್ ಕ್ಲಬ್ ಅಧ್ಯಕ್ಷೆ ನಾಗರತ್ನಾ ಮಾರನಬಸರಿ, ಕಾರ್ಯದರ್ಶಿ ಪ್ರೊ.ವೀಣಾ ತಿರ್ಲಾಪೂರ ಉಪಸ್ಥಿತರಿದ್ದರು.

ಪ್ರೇಮಾ ಹಂದಿಗೋಳ ಪ್ರಾರ್ಥಿಸಿದರು, ಶ್ರೀಧರ ಸುಲ್ತಾನಪೂರ ಸ್ವಾಗತಿಸಿದರು. ಶಿವಯೋಗಿ ಗಡ್ಡದಮಠ ನಿರೂಪಿಸಿದರು. ಸಂತೋಷ ಅಕ್ಕಿ ವಂದಿಸಿದರು. ನಟವರಿ ಕಲಾ ಪರಿಷತ್ ವಿದ್ಯಾರ್ಥಿಗಳಿಂದ ನೃತ್ಯ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದಲ್ಲಿ ಕ್ಲಬ್ ಅಸಿಸ್ಟಂಟ್ ಗವರ್ನರ್ ಶಿವಾಚಾರ್ಯ ಹೊಸಳ್ಳಿಮಠ, ಡಾ. ಶೇಖರ ಸಜ್ಜನ, ಎಚ್.ಎಸ್. ಪಾಟೀಲ, ಸುರೇಶ ಕುಂಬಾರ, ಬಾಲಕೃಷ್ಣ ಕಾಮತ್, ಚಂದ್ರಮೌಳಿ ಜಾಲಿ, ಡಾ. ವ್ಹಿ.ಸಿ. ಕಲ್ಮಠ, ಅರವಿಂದಸಿಂಗ್ ಬ್ಯಾಳಿ, ಅಕ್ಷಯ ಶೆಟ್ಟಿ, ಡಾ. ಪ್ರದೀಪ ಉಗಲಾಟ, ಪ್ರೇಮಾ ಗುಳಗೌಡ್ರ, ಸುಮಾ ಪಾಟೀಲ, ಪುಷ್ಪಾ ಭಂಡಾರಿ, ಸುನಿತಾ ಬುರಡಿ, ಶಾಂತ ಗೌಡರ, ರೇಶ್ಮಾ ಬಸರಿಗಿಡದ, ಮೀನಾಕ್ಷಿ ಕೊರವನವರ, ಜ್ಯೋತಿ ದಾನಪ್ಪಗೌಡ್ರ, ಸುವರ್ಣಾ ಮದರಿಮಠ, ಅಶ್ವಿನಿ ಜಗತಾಪ, ಉಮಾ ಕವಳಿಕಾಯಿ ಮುಂತಾದವರಿದ್ದರು.

ಸಮಾರಂಭದಲ್ಲಿ ಹಿರಿಯ ಸಂಗೀತ ಕಲಾವಿದ ಪಂ.ರಾಜಗುರು ಗುರುಸ್ವಾಮಿ ಕಲಕೇರಿ, ನಾಟಕ ಅಕಾಡೆಮಿ ಪ್ರಸಸ್ತಿ ಪುರಸ್ಕೃತ ಹಿರಿಯ ರಂಗಕರ್ಮಿ ಆರ್.ಎನ್. ಕುಲಕರ್ಣಿ, ಹಿರಿಯ ರೇಖಾಚಿತ್ರ ಕಲಾವಿದ ಪುಂಡಲೀಕ ಕಲ್ಲಿಗನೂರ, ಹಿರಿಯ ನೃತ್ಯ ಕಲಾವಿದೆ ವಿದುಷಿ ವಿದ್ಯಾ ಮೊರಬ, ಜಾನಪದ ಅಕಾಡೆಮಿ ಸದಸ್ಯ ಹಾಗೂ ಹಿರಿಯ ಕಲಾವಿದ ಶಂಕ್ರಣ್ಣ ಸಂಕಣ್ಣವರ ಮತ್ತು ಆರ್.ಎಸ್. ಬುರಡಿ ಅವರನ್ನು ಸನ್ಮಾನಿಸಲಾಯಿತು.

### ಎಸ್ಸಿ ಸಮುದಾಯಗಳಿಗೆ ಒಳ ಮೀಸಲಾತಿ ನೀಡಲು ಸುಪ್ರೀಂ ಕೋರ್ಟ್ ಆದೇಶ

# ನಮ್ಮ ಸರ್ಕಾರದ ನಿರ್ಣಯಕ್ಕೆ ಸಿಕ್ಕ ಜಯ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಎಸ್ಸಿ ಸಮುದಾಯಗಳಿಗೆ ಒಳ ಮೀಸಲಾತಿ ನೀಡಲು ಸುಪ್ರೀಂ ಕೋರ್ಟ್ ಒಪ್ಪಿಗೆ ನೀಡಿರುವುದು ನಮ್ಮ ಸರ್ಕಾರದ ನಿರ್ಣಯಕ್ಕೆ ಸಿಕ್ಕ ಜಯವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಸರಣಿ ಟ್ವೀಟ್ ಮಾಡಿರುವ ಅವರು, ಅತ್ಯಂತ ಹಿಂದುಳಿದ ಎಸ್ಸಿ ಸಮುದಾಯಗಳಿಗೆ ಶತಮಾನಗಳಿಂದಲೂ ಅನ್ಯಾಯ ಆಗಿರುವುದನ್ನು ಮನಗಂಡು, ಎಸ್ಸಿ ಸಮುದಾಯ 3–4 ದಶಕಗಳಿಂದ ಆಂತರಿಕ ಮೀಸಲಾತಿಯ ಬೇಡಿಕೆ ಇಟ್ಟು ಹೋರಾಟ ಮಾಡುತ್ತಿದ್ದರು.

ನಮ್ಮ ಸರ್ಕಾರ ಆಂತರಿಕ ಮೀಸಲಾತಿಯನ್ನು ಸಂಪುಟದಲ್ಲಿ ಒಪ್ಪಿ, ಸರ್ಕಾರಿ ಆದೇಶವನ್ನು ಮಾಡಿ, ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುವ ನಿಲುವನ್ನು 7 ನ್ಯಾಯಾಧೀಶರನ್ನೊಳಗೊಂಡ ಸರ್ವೋಚ್ಚ ನ್ಯಾಯಾಲಯದ ಸಂವಿಧಾನಿಕ ಪೀಠ ಎತ್ತಿ ಹಿಡಿದಿರುವುದು ಐತಿಹಾಸಿಕ ತೀರ್ಪು ಮತ್ತು ಎಸ್ಸಿ ಜನಾಂಗದ ಒಳ ಮೀಸಲಾತಿ ಹೋರಾಟಕ್ಕೆ ಸಿಕ್ಕ ಜಯ ಎಂದು ಹೇಳಿದ್ದಾರೆ.

ಇದಕ್ಕೆ ಸಹಕಾರ ನೀಡಿದ ಪ್ರಧಾನಮಂತ್ರಿ ನರೇಂದ್ರ ಮೋದಿ, ಅಂದು ಎಸ್ಸಿ ಸಮುದಾಯದ ಸಚಿವರಾಗಿದ್ದ ಗೋವಿಂದ ಕಾರಜೋಳ ಮತ್ತು ನನ್ನ ಸಚಿವ ಸಂಪುಟದ ಎಲ್ಲ ಸದಸ್ಯರಿಗೆ ಮತ್ತು ರಾಜ್ಯ ಬಿಜೆಪಿಯ ಎಲ್ಲ ನಾಯಕರಿಗೆ ಧನ್ಯವಾದಗಳು ಎಂದು ತಿಳಿಸಿದ್ದಾರೆ.

# ನದಿ ಪಾತ್ರದ ಹಳ್ಳಿಗಳಿಗೆ ಬಿ.ಆರ್. ಯಾವಗಲ್ ಭೇಟಿ



■ವಿಜಯಸಾಕ್ಷಿ ಸುದ್ದಿ, ನರಗುಂದ

ನವಿಲುತೀರ್ಥ ಅಣೆಕಟ್ಟಿನಿಂದ ಹೆಚ್ಚಿನ ನೀರು ಹೊರಬಿಟ್ಟಿರುವ ಹಿನ್ನೆಲೆಯಲ್ಲಿ ನರಗುಂದ ಮತಕ್ಷೇತ್ರದ ವ್ಯಾಪ್ತಿಗೆ ಒಳಪಡುವ ಮಲಪ್ರಭಾ ನದಿ ಪಾತ್ರದ ಹಳ್ಳಿಗಳಿಗೆ ಮಾಜಿ ಸಚಿವ ಬಿ.ಆರ್. ಯಾವಗಲ್ ಸ್ಥಳೀಯ ಮುಖಂಡರೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಅಲ್ಲಿಯ ಸ್ಥಿತಿ–ಗತಿಯ ಮಾಹಿತಿ ಪಡೆದುಕೊಂಡರು.

ಕಿತ್ತಲಿ ಹಾಗೂ ಶಿರೋಳಕ್ಕೆ ಸಂಪರ್ಕ ಕಲ್ಪಿಸುವ ಸೇತುವೆ ಸಂಪೂರ್ಣ ಜಲಾವೃತಗೊಂಡಿದ್ದು, ನದಿ ಪಾತ್ರದ ಜಮೀನುಗಳಿಗೆ ನೀರು ನುಗ್ಗಿ ಫಸಲಿಗೆ ಬಂದ ಬೆಳೆ ನೀರಲ್ಲಿ ನಿಂತಿರುವುದನ್ನು ಗಮನಿಸಿದರು.

ಈ ಸಂದರ್ಭದಲ್ಲಿ ಶಿರೋಳ ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ವಾಯ್.ಬಿ. ಸಂಕನಗೌಡ್ರ, ಗ್ರಾ.ಪಂ ಮಾಜಿ ಸದಸ್ಯ ಪ್ರಕಾಶ ಸೋಬರದ, ಗ್ರಾ.ಪಂ ಸದಸ್ಯರಾದ ಭದ್ರಯ್ಯ ಹೊಸಮನಿ, ರಂಜಾನ ನದಾಫ್, ದ್ಯಾಮಣ್ಣ ಕಾಡಪ್ಪನವರ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

ಕರ್ನಾಟಕ ಸರ್ಕಾರ (ಮೀನುಗಾರಿಕೆ ಇಲಾಖೆ)

**ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಛೇರಿ ಗದಗ**

ಅಲ್ಪಾವಧಿ ಟೆಂಡರ್ ಅಧಿಸೂಚನೆ ಸಂ: ರಾವ/ಮೀಕಿಟ್/1/2024–25 ದಿನಾಂಕ : 02/08/2024

**ಅಲ್ಪಾವಧಿ ಟೆಂಡರ್ ಪ್ರಕಟಣೆ**

2024–25 ನೇ ಸಾಲಿನ ರಾಜ್ಯ ವಲಯ ಕಿಟ್ ಯೋಜನೆಯಡಿಯಲ್ಲಿ ಗದಗ ಜಿಲ್ಲೆಯ ಮೀನುಗಾರಿಕೆ ಇಲಾಖೆಯ ವ್ಯಾಪ್ತಿಯ ಮೀನುಗಾರಿಕೆ ಸಹಾಯಕ ನಿರ್ದೇಶಕರು ಗದಗ ಕಛೇರಿಗೆ ಸಾಮಗ್ರಿ ಖರೀದಿಸಿ ಫಲಾನುಭವಿಗಳಿಗೆ ಪೂರೈಸಬೇಕಾಗಿದ್ದು, ಈ ಕೆಳಕಾಣಿಸಿದ ಕಿಟ್/ಲೈಫೆಜಾಕೆಟ್/ಹರಿಗೋಲು ಸಾಮಗ್ರಿಗಳನ್ನು ಪೂರೈಸಲು ಸರಬರಾಜುದಾರರಿಗೆ ತಮ್ಮ ಕನಿಷ್ಠ ದರಗಳನ್ನು ಸಾಮಗ್ರಿಗಳ ಅನುಸಾರವಾಗಿ ಅಲ್ಪಾವಧಿ ಟೆಂಡರ್ ದರಪಟ್ಟಿ ಪೂರೈಸಬೇಕಾದ ಸಾಮಗ್ರಿಗಳ ವಿವರ.

**1**) 0.23 Mesh size 110mm, 40 MD Double knot, Double selvage nylon monofilament fish net NET-26. **2**) 0.23 Mesh size 116mm, 40MD Double knot, Double selvage nylon monofilament fish net NET-27. **3**) 0.16 Mesh 150mm, 40MD Double knot, Double selvage nylon monofilament fish net NET-14. **4**) 0.16 Mesh size 25mm, 100MD Double knot and Double selvage NET-15. **5**) 0.16 Mesh size 38mm, 100MD Double knot and Double selvage NET-16. **6**) 0.16 Mesh size 46mm, 100MD Double knot and Double selvage NET-17. **7**) Nylon head rope 5/3 ply NET-10. **8**) Nylon bottom rope (HDPE) 2mm thick. NET-9. **9**) Sinkers 2mm thick lead NET-04. **10**) Floats 30X60 MM PVC NET -02. **11**) Insulated moulded Ice Box - IB-001. **12**) Plastic crate -PLC-01. **13**) Life Jacket LJ-001. **14**) Iron weighing Scale WS-001. **15**) Fiber Glass Coracle–6.5 feet diameter with 2 oars COR-02.

ಮೀನುಗಾರಿಕೆ ಸಹಾಯಕ ನಿರ್ದೇಶಕರು ಗದಗ ಕಛೇರಿಗೆ ನಿಗಧಿಪಡಿಸಿದ ಗುರಿಗಳ ವಿವರ (ಆರ್ಥಿಕ ರೂ. ಲಕ್ಷಗಳಲ್ಲಿ)

| ಕ್ರ. ಸಂ. | ಯೋಜನೆ/ತಾಲೂಕು | ಮೀನುಗಾರಿಕೆ ಸಹಾಯಕ ನಿರ್ದೇಶಕರು ಗದಗ | | |
|---|---|---|---|---|
| | | ಆರ್ಥಿಕ | ಭೌತಿಕ | ಒಟ್ಟು ಮೊತ್ತ |
| 1 | ರಾಜ್ಯ ವಲಯ ಮೀನುಗಾರಿಕೆ ಸಲಕರಣೆ ಕಿಟ್ ವಿತರಣೆ 2405–00–110–0–02 (106 ಸಾಮಾನ್ಯ) | **1.50** | **15** | **1.50** |

(1) ಕಛೇರಿವಾರು ನಿಗಧಿಪಡಿಸಿದ ಆರ್ಥಿಕ ಗುರಿ ಅನ್ವಯ ಶೇಕಡಾ 2.5 ರಷ್ಟು ಇ.ಎಂ.ಡಿ. ಮೊತ್ತವನ್ನು ರಾಷ್ಟ್ರೀಕೃತ ಬ್ಯಾಂಕಿನ ನಗದು ಹುಂಡಿಯನ್ನು ಮೀನುಗಾರಿಕೆ ಸಹಾಯಕ ನಿರ್ದೇಶಕರು ಗದಗ ಕಚೇರಿಯ ಹೆಸರಿನಲ್ಲಿ ಸಲ್ಲಿಸಬೇಕು. (2) ರೂ. **300/–** ಗಳನ್ನು ನಗದಾಗಿ ಪಾವತಿಸಿ ಟೆಂಡರ್ ಫಾರಂಗಳನ್ನು ಕಛೇರಿ ವೇಳೆಯಲ್ಲಿ ಪಡೆಯತಕ್ಕದ್ದು (3) ಖಾಲಿ ಟೆಂಡರ್ ಅರ್ಜಿ ಫಾರಂಗಳನ್ನು ಪಡೆದುಕೊಳ್ಳಲು ಅರ್ಜಿ ಸಲ್ಲಿಸಬೇಕಾದ ಕೊನೆಯ ದಿನಾಂಕ : **12/08/2024** ರ ಮಧ್ಯಾಹ್ನ 12:00 ಘಂಟೆಯವರೆಗೆ. (4) ಖಾಲಿ ಟೆಂಡರ್ ಅರ್ಜಿ ಫಾರಂಗಳನ್ನು ವಿತರಿಸುವ ಕೊನೆಯ ದಿನಾಂಕ : **13/08/2024** ರ ಸಂಜೆ 4:00 ಘಂಟೆಯವರೆಗೆ. (5) ಅರ್ಜಿ ತುಂಬಿದ ಹಾಗೂ ಶೀಲ್ಡ್ ಮಾಡಿದ ಟೆಂಡರ್ ಫಾರಂಗಳನ್ನು ಸಲ್ಲಿಸುವ ಕೊನೆಯ ದಿನಾಂಕ : **14/08/2024** ರ ಮಧ್ಯಾಹ್ನ 1:00 ಘಂಟೆಯವರೆಗೆ (6) ದಿನಾಂಕ : **14/08/2024** ರಂದು ಮಧ್ಯಾಹ್ನ 4:00 ಕ್ಕೆ ಶೀಲ್ಡ ಕವರುಗಳನ್ನು ಮೀನುಗಾರಿಕೆ ಉಪನಿರ್ದೇಶಕರು ಗದಗ ರವರ ಕಛೇರಿಯಲ್ಲಿ ತೆರೆಯಲಾಗುವುದು. ಸಾಧ್ಯವಾಗದೇ ಇದ್ದಲ್ಲಿ ಮುಂದಿನ ಕಛೇರಿಯ ದಿನದಂದು ತೆರೆಯಲಾಗುವುದು. ಹೆಚ್ಚಿನ ಮಾಹಿತಿಗಾಗಿ (ಮೊಬೈಲ್ ಸಂ : **9880210505**) ಈ ಕಚೇರಿಯನ್ನು ಸಂಪರ್ಕಿಸಲು ಕೋರಿದೆ.

ವಾಸಾಸಂಇ/ಗದಗ/ಕೆಎಸ್ಎಂಸಿಎ/130/2024–25 **ಸಹಿ/– ಮೀನುಗಾರಿಕೆ ಸಹಾಯಕ ನಿರ್ದೇಶಕರು, ಗದಗ**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka